# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 127 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 30–11–2023 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 127 | Title- Code: KARKAN 28269 | Chitradurga | Date: 30-11-2023 Thursday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಭರಮಸಾಗರ ಪ್ರಥಮ ದರ್ಜೆ ಕಾಲೇಜಿನಲ್ಲಿ ಪಠ್ಯೇತರ ಚಟುವಟಿಕೆ ಶಾಸಕ ಉದ್ಘಾಟನೆ 2

ಪೌಷ್ಠಿಕಾಂಶವುಳ್ಳ ಆಹಾರ ಸೇವನೆ ಮೂಲಕ ಸದೃಢ ಆರೋಗ್ಯಕ್ಕೆ ಮುಂದಾಗಿ 3

ಮುಂದಿನ ಜನತಾ ದರ್ಶನದೊಳಗೆ ಶೇಕಡ ನೂರರ ಗುರಿ ಮುಟ್ಟಬೇಕು: ಗೋವಿಂದಪ್ಪ 4



ಸುದ್ದಿ, ಜಾಹಿರಾತಿಗೆ 9686622252


# ಕೊನೆಗೂ ಗುಂಡಿ ಮುಚ್ಚಿದರು, ನಿಟ್ಟುಸಿರು ಬಿಟ್ಟ ವಾಹನ ಸವಾರರು

» **ಚಿತ್ರದುರ್ಗ**

ಕೋಟೆ ನಾಡು ಚಿತ್ರದುರ್ಗ ಜಿಲ್ಲಾ ಕೇಂದ್ರವಾದರು ನಗರದ ಮುಖ್ಯ ರಸ್ತೆಗಳಲ್ಲಿ ಮೊಣಕಾಲು ಉದ್ದ ಗುಂಡಿಗಳು ನಾವು ಕಾಣಬಹುದು. ಇದನ್ನು ನಿತ್ಯ ಕಾಣುತ್ತಿದ್ದರು ಇಂದಲ್ಲ ನಾಳೆ ಗುಂಡಿ ಮುಚ್ಚಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಿತ್ತಾರೆ ಎಂದು ಕಾದು ನೋಡಿದ "ನಮ್ಮ ಜನ ಪತ್ರಿಕೆ ಟೀಂ" ಕೊನೆಗೂ ಗುಂಡಿ ಮುಚ್ಚದ ಪರಿಣಾಮವಾಗಿ ವಿಶೇಷ ವರದಿಯನ್ನು ' ಗುಂಡಿ ಮುಚ್ಚೋಕೆ ಏನ್ ಪ್ರಾಬ್ಲಂ' ಎಂಬ ಸುದ್ದಿಯನ್ನು ಪತ್ರಿಕೆ ಮುಖ ಪುಟದಲ್ಲಿ ನವೆಂಬರ್10 ರಂದು ಸುದ್ದಿ ಮಾಡಲಾಗಿತ್ತು.

ಈ ಸುದ್ದಿಯ ಫಲವಾಗಿ ಸುದ್ದಿಯನ್ನು ಗಮನಿಸಿದ ಅಧಿಕಾರಿಗಳು 15 ದಿನದ ನಂತರ ನಿದ್ರೆಯಿಂದ ಎದ್ದ ಅಧಿಕಾರಿಗಳು ನವೆಂಬರ್ 28 ರಂದು ಗುಂಡಿ ಮುಚ್ಚಿ ಟಾರು ಹಾಕಿದ್ದು ರಸ್ತೆಯ ಗುಂಡಿಗೆ ಮುಕ್ತಿ ಸಿಕ್ಕಿದೆ. ನಮ್ಮ ಜನ ಪತ್ರಿಕೆ ವರದಿಯ ಫಲವಾಗಿ ಗುಂಡಿ ಮುಚ್ಚಿದ್ದು ನಿತ್ಯ ಸಾವಿರಾರು ವಾಹನಗಳ ಕಿರಿಕಿರಿಗೆ ಮುಕ್ತಿ ಸಿಕ್ಕಂತಾಗಿದೆ. ಇನ್ನಾದರೂ ಅಧಿಕಾರಿಗಳು ಎಚ್ಚರಿಕೆ ವಹಿಸಿ ನಗರದ ಗುಂಡಿಗಳು ಮುಚ್ಚುವ ಕೆಲಸವಾಗಲಿ ಎಂಬುದು ನಮ್ಮ ಜನ ಪತ್ರಿಕೆ ಕಾಳಜಿಯಾಗಿದೆ.




## ಮೊದಲ ಗುಂಡಿಗೆ ಸಿಮೆಂಟ್ ಹಾಕಿದ್ದು ಸಂಜೀವಿನಿ ಜೀವ ರಕ್ಷಕ ಟ್ರಸ್ಟ್

ನಮ್ಮ ಜನ ಪತ್ರಿಕೆಯ ವರದಿಯನ್ನಯ ಕೂಡಲೇ ಗಮನಿಸಿದ ಸಂಜೀವಿನಿ ಟ್ರಸ್ಟ್ ವತಿಯಿಂದ ಎರಡ್ಮೂರು ದಿನದಲ್ಲಿ ಸಿಮೆಂಟ್ ಹಾಕಿ ದೊಡ್ಡ ಗುಂಡಿಯನ್ನು ಮುಚ್ಚುವ ಕೆಲಸ ಮಾಡಿದರು.



ಗುಂಡಿ ಮುಚ್ಚೋಕೆ ದುಡ್ಡಿಲ್ವ, ನಿಮಗೆ ಮನಸ್ಸಿಲ್ವ

ರಸ್ತೆ ಗುಂಡಿ ಮುಚ್ಚೋಕೆ ಏನ್ ಪ್ರಾಬ್ಲಂ



- ಚಳ್ಳಕೆರೆ ಗೇಟ್ ರಸ್ತೆಯಲ್ಲಿ ದೊಡ್ಡ ಗುಂಡಿ
- ವಾಹನ ಸವಾರರಿಗೆ ದೊಡ್ಡ ಚಾಲೆಂಜ್
- ರಸ್ತೆ ಗುಂಡಿ ಮುಚ್ಚದೇ ಬ್ಯಾರಿಕೇಟ್ ಇಟ್ಟವರ್ಯಾರು
- ಚಿಕ್ಕಗುಂಡಿ ಈಗ ಚಿಕ್ಕ ತೊಟ್ಟಿಯಾಗಿ ಪರಿವರ್ತನೆ
- ರಾತ್ರಿ ಅಪಘಾತ ಸಂಭವ ಹೆಚ್ಚು
- ಒನ್ ವೇ ಪ್ರಾಬ್ಲಂ ಜೊತೆಗೆ ಗುಂಡಿ ಪ್ರಾಬ್ಲಂ
- ಕಣ್ಮುಚ್ಚಿ ಕುಳಿತ ಅಧಿಕಾರಿಗಳು
- ಗುಂಡಿ ಮುಚ್ಚಲು ಹಣವಿಲ್ಲ ಎಂಬ ಅನುಮಾನ
- ಮಿಸ್ ಆದರೆ ಸೊಂಟ ಮುರಿಯೋದು ಗ್ಯಾರೆಂಟಿ

**ಫಾಸ್ಟ್ ನ್ಯೂಸ್**

## 8 ಕೋಟಿ ಹಣ ಜಪ್ತಿ ಮಾಡಿದ ಹೊಳಲ್ಕೆರೆ ಪೋಲಿಸರು



» **ಚಿತ್ರದುರ್ಗ**

ಯಾವುದೇ ದಾಖಲೆ ಇಲ್ಲದೆ ಚಿತ್ರದುರ್ಗದಿಂದ ಹೊಳಲ್ಕೆರೆ ಮಾರ್ಗವಾಗಿ ಶಿವಮೊಗ್ಗಕ್ಕೆ ಸಾಗಿಸುತ್ತಿದ್ದ ಬರೋಬ್ಬರಿ 8 ಕೋಟಿ ಮೊತ್ತದ ಹಣವನ್ನು ಹೊಳಲ್ಕೆರೆ ಪೊಲೀಸರು ಜಪ್ತಿ ಮಾಡಿದ್ದಾರೆ. ಚಿತ್ರದುರ್ಗ ಜಿಲ್ಲೆ ಹೊಳಲ್ಕೆರೆ ತಾಲೂಕಿನ ಮಲ್ಲಾಡಿಹಳ್ಳಿ ಬಳಿ ಇನೋವಾ ಕಾರಿನಲ್ಲಿ ತೆರಳುತಿದ್ದ ಚಾಲಕ ಸಚಿನ್‌ನನ್ನು ವಶಕ್ಕೆ ಪಡೆದಿರುವ ಪೊಲೀಸರು ಕಾರಿನಲ್ಲಿ ತಂಬಾಕು ಚೀಲಗಳಲ್ಲಿ ತುಂಬಲಾಗಿದ್ದ 8 ಕೋಟಿ ರೂ. ಹಣವನ್ನು ಜಪ್ತಿ ಮಾಡಿದ್ದಾರೆ. ಈ ಹಣ ಚಿತ್ರದುರ್ಗದ ಅಡಿಕೆ ವರ್ತಕರಿಗೆ ಸೇರಿದ್ದು ಎಂಬ ಅನುಮಾನವಿದ್ದು, ಖಚಿತ ಮಾಹಿತಿಗಾಗಿ ಆದಾಯ ತೆರಿಗೆ ಅಧಿಕಾರಿಗಳಿಗೆ ಈ ಮಾಹಿತಿಯನ್ನು ನೀಡಲಾಗಿದೆ. ವಿಚಾರಣೆ ಬಳಿಕ ಈ ಹಣ ಯಾರಿಗೆ ಸೇರಿದ್ದು ಹಾಗೂ ಯಾವ ಕಾರಣಕ್ಕೆ ಸಾಗಿಸಲಾಗುತ್ತಿತ್ತು ಎಂಬುದು ತಿಳಿಯಲಿದೆ ಎಂದು ಎಸ್‌ಪಿ ಧರ್ಮೇಂದರ್ ಕುಮಾರ್ ಮೀನಾ ಮಾಹಿತಿ ನೀಡಿದ್ದಾರೆ. ಜಪ್ತಿಯಾಗಿರುವ ಭಾರೀ ಮೊತ್ತದ ಹಣ ಎಣಿಕೆ ಕಾರ್ಯವನ್ನು ಹೊಳಲ್ಕೆರೆ ಪೊಲೀಸರು ಕೈಗೊಂಡಿದ್ದಾರೆ. ಈ ಪ್ರಕರಣ ಹೊಳಲ್ಕೆರೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಈ ಘಟನೆ ಜರುಗಿದೆ.

## ಏಕಲವ್ಯ ಪ್ರಶಸ್ತಿ: ಅರ್ಜಿ ಆಹ್ವಾನ

» **ಚಿತ್ರದುರ್ಗ**

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಕ್ರೀಡಾ ಕ್ಷೇತ್ರದಲ್ಲಿ ಅಸಾಧಾರಣ ಪ್ರತಿಭೆಯನ್ನು ತೋರಿರುವ ಕ್ರೀಡಾಪಟುಗಳಿಗೆ ಏಕಲವ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ. ಅಸಾಧಾರಣ ಪ್ರತಿಭೆಯನ್ನು ತೋರಿರುವ ಅರ್ಹತೆಯುಳ್ಳ ಕ್ರೀಡಾಪಟುಗಳಿಗೆ ಪ್ರಶಸ್ತಿಯನ್ನು ನೀಡಿ ಸನ್ಮಾನಿಸಿ ಗೌರವಿಸಲಾಗುವುದು. ಜಿಲ್ಲೆಯ ಅರ್ಹ ಮತ್ತು ಆಸಕ್ತ ಕ್ರೀಡಾಪಟುಗಳು ಕಚೇರಿಯಲ್ಲಿ ನಿಗದಿತ ಅರ್ಜಿ ನಮೂನೆಯನ್ನು ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದಾಖಲಾತಿಗಳೊಂದಿಗೆ ಡಿಸೆಂಬರ್ 6 ರೊಳಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಒನಕೆ ಓಬವ್ವ ಜಿಲ್ಲಾ ಕ್ರೀಡಾಂಗಣ, ಚಿತ್ರದುರ್ಗ ಕಚೇರಿಗೆ ಸಲ್ಲಿಸಬೇಕು ಎಂದು ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಕುರುಮರಡಿಕೆರೆಯಲ್ಲಿ ತಾಲ್ಲೂಕು ಮಟ್ಟದ ಜನತಾ ದರ್ಶನದಲ್ಲಿ –ಅಧಿಕಾರಿಗಳಿಗೆ ಸೂಚನೆ**

# ಜನರ ಸಮಸ್ಯೆ ಪರಿಹಾರಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡಿ: ಶಾಸಕ ವೀರೇಂದ್ರ ಪಪ್ಪಿ

» **ಚಿತ್ರದುರ್ಗ**

ಜನತಾ ದರ್ಶನ ಕಾರ್ಯಕ್ರಮದಲ್ಲಿ ಜನರ ಸಮಸ್ಯೆ ಆಲಿಸಿ, ಜನರ ಸಮಸ್ಯೆ ಪರಿಹಾರಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಚಿತ್ರದುರ್ಗ ತಾಲ್ಲೂಕಿನ ಇಂಗಳದಾಳ್ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕುರುಮರಡಿಕೆರೆ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆ ಆವರಣದಲ್ಲಿ ಬುಧವಾರ ಜಿಲ್ಲಾಡಳಿತ,ಜಿಲ್ಲಾ ಪಂಚಾಯಿತಿ,ತಾಲ್ಲೂಕು ಆಡಳಿತ ವತಿಯಿಂದ ಹಮ್ಮಿಕೊಂಡಿದ್ದ ತಾಲ್ಲೂಕು ಮಟ್ಟದ ಜನತಾ ದರ್ಶನದಲ್ಲಿ ಸಾರ್ವಜನಿಕರ ಅಹವಾಲು ಸ್ವೀಕರಿಸಿ ಅವರು ಮಾತನಾಡಿದರು.





ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸರ್ಕಾರದ ಯೋಜನೆ, ಸೌಲಭ್ಯ ತಲುಪಿಸಬೇಕು ಎಂಬುವುದು ಜನತಾ ದರ್ಶನದ ಮುಖ್ಯ ಆಶಯವಾಗಿದ್ದು, ಜನತಾ ದರ್ಶನದ ಮೂಲಕ ಸಾರ್ವಜನಿಕರ ಸಮಸ್ಯೆಗಳಿಗೆ ತ್ವರಿತವಾಗಿ ಪರಿಹಾರ ಒದಗಿಸಲಾಗುತ್ತಿದೆ. ಜನರ ಸಮಸ್ಯೆಗಳ ಪರಿಹಾರಕ್ಕೆ ಶೀಘ್ರ ಕ್ರಮ ವಹಿಸಲಾಗುವುದು. ಅಧಿಕಾರಿಗಳು ತಮ್ಮ ಜವಾಬ್ದಾರಿ ಅರಿತು ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಇಂಗಳದಾಳ್ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ 160 ಮನೆಗಳಿಗೆ ಅನುಮೋದನೆ ದೊರೆತಿದೆ. ಮುಂದಿನ ದಿನಗಳಲ್ಲಿ ಎಲ್ಲ ಫಲಾನುಭವಿಗಳಿಗೆ ಕಾರ್ಯಾದೇಶ ನೀಡಲು ಕ್ರಮ ಕೈಗೊಳ್ಳಲಾಗುವುದು. ಚಿತ್ರದುರ್ಗ ರಾಷ್ಟ್ರೀಯ ಹೆದ್ದಾರಿ–4 ರಿಂದ ಯರೇಹಳ್ಳಿವರೆಗೂ ಉತ್ತಮ ರಸ್ತೆ ನಿರ್ಮಾಣಕ್ಕೆ ಡಿಪಿಆರ್ ಸಿದ್ದಪಡಿಸುವಂತೆ ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಚಿತ್ರದುರ್ಗ ವಿಧಾನಸಭಾಕ್ಷೇತ್ರ ವ್ಯಾಪ್ತಿಯಲ್ಲಿ ಬಹಳಷ್ಟು ಜಾಗವನ್ನು ವಿಂಡ್‌ಮಿಲ್ ಕಂಪನಿಗೆ ನೀಡಲಾಗಿದ್ದು, ವಿಂಡ್‌ಮಿಲ್ ಕಂಪನಿಯ ಸಿಎಸ್‌ಆರ್ ನಿಧಿಯು ವಿಧಾನಸಭಾ ಕ್ಷೇತ್ರದ ಜನರಿಗೆ ಉಪಯೋಗವಾಗಬೇಕು. ಈ ಕುರಿತು ಮುಂದಿನ ದಿನಗಳಲ್ಲಿ ವಿಂಡ್‌ಮಿಲ್ ಕಂಪನಿಯವರ ಸಭೆ ಕರೆಯುವಂತೆ ಜಿಲ್ಲಾಧಿಕಾರಿಗಳಿಗೆ ತಿಳಿಸಿದ ಅವರು, ಮುಂದಿನ ದಿನಗಳಲ್ಲಿ ಚಿತ್ರದುರ್ಗ ತಾಲ್ಲೂಕಿನ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲೂ ಜನತಾ ದರ್ಶನ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದರು.

ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಮಾತನಾಡಿ,ರಾಜ್ಯದಲ್ಲಿಸರ್ಕಾರಅಧಿಕಾರಕ್ಕೆ ಬಂದು ಆರು ತಿಂಗಳಾಗಿದೆ. ಸರ್ಕಾರದ ಗ್ಯಾರಂಟಿ ಯೋಜನೆಗಳು ಸೇರಿದಂತೆ ವಿವಿಧ ಯೋಜನೆಗಳನ್ನು ಜನರಿಗೆ ತಲುಪಿಸಲಾಗುತ್ತಿದೆ. ಎಲ್ಲ ಇಲಾಖೆಗಳು ಚುರುಕಾಗಿ ಕಾರ್ಯನಿರ್ವಹಿಸುವಂತೆ ಮುಖ್ಯಮಂತ್ರಿಗಳು ಕಾಲಕಾಲಕ್ಕೆ ಅಧಿಕಾರಿಗಳಸಭೆನಡೆಸಿ,ಜನರಸಮಸ್ಯೆಗಳಿಗೆ ತಕ್ಷಣ ಸ್ಪಂದಿಸುವ ಆಡಳಿತ ಕೊಡುವಂತೆ ನಿರ್ದೇಶನ ನೀಡಿದ್ದಾರೆ ಎಂದರು. ಕಳೆದ ಎರಡು ತಿಂಗಳಿಂದ ಜನತಾ ದರ್ಶನ ಕಾರ್ಯಕ್ರಮ ಶುರುವಾಗಿದ್ದು, ತಾಲ್ಲೂಕು ಮತ್ತು ಜಿಲ್ಲಾಮಟ್ಟದ ಜನತಾ ದರ್ಶನ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ. ಜನತಾ ದರ್ಶನ ಎಂಬುವುದು ಜನರ ದರ್ಶನವಲ್ಲ. ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು. ಜನರ ಸಮಸ್ಯೆಗಳಿಗೆ ಸ್ಪಂದಿಸಿದಾಗ ಮಾತ್ರ ಜನರು ವಿವಿಧ ಇಲಾಖೆಗಳಿಗೆ ಅಲೆದಾಡುವುದು ತಪ್ಪಲಿದೆ. ಜನರಿಗೆ ಯಾವುದೇ ಅಡೆತಡೆಯಿಲ್ಲದೇ ಕಾಲವಿಳಂಬವಿಲ್ಲದೇ ತಕ್ಷಣವೇ ಸಮಸ್ಯೆಗಳಿಗೆ ಪರಿಹಾರ ನೀಡುವುದಕ್ಕೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಜನತಾ ದರ್ಶನದಲ್ಲಿ ಇದುವರೆಗೂ 1191 ಅರ್ಜಿಗಳು ಸ್ವೀಕೃತವಾಗಿದ್ದು, 791 ಅರ್ಜಿಗಳನ್ನು ವಿಲೇಪಡಿಸಲಾಗಿದ್ದು, 400 ಅರ್ಜಿಗಳು ವಿಲೇಪಡಿಸುವುದು ಬಾಕಿ ಇದೆ, ನಿಗದಿತ ಕಾಲಮಿತಿಯೊಳಗೆ ಅರ್ಜಿಗಳನ್ನು ವಿಲೇಪಡಿಸಲಾಗುವುದು ಎಂದು ಹೇಳಿದರು. ಜನತಾ ದರ್ಶನ ಸರ್ಕಾರದ ಮಹತ್ವಾಕಾಂಕ್ಷೆಯ ಉತ್ತಮ ಕಾರ್ಯಕ್ರಮವಾಗಿದೆ. ಜನತಾ ದರ್ಶನ ಕಾರ್ಯಕ್ರಮದಲ್ಲಿ ಜನರ ಮನೆಬಾಗಿಲಿಗೆ ಹೋಗಿ ಸರ್ಕಾರದ ಯೋಜನೆ, ಸೌಲಭ್ಯಗಳನ್ನು ತಲುಪಿಸಲಾಗುತ್ತಿದೆ. ಫಲಾನುಭವಿ ಆಧಾರಿತ ಯೋಜನೆಗಳಿಗೆ ಅರ್ಹರಿದ್ದರೆ ತಕ್ಷಣವೇ ಸೌಲಭ್ಯ ತಲುಪಿಸಲು ಕ್ರಮವಹಿಲಾಗುವುದು. ಕಂದಾಯ ಇಲಾಖೆಗೆ ಸಂಬಂಧಪಟ್ಟ ಸರ್ವೆ, ಪೋಡಿ ಮಾಡಲು ಸಮಯ ಬೇಕಾಗಲಿದೆ. ಹಾಗಾಗಿ ಅಂತಹ ವಿಷಯಗಳನ್ನು ಒಂದು ತಿಂಗಳೊಳಗೆ ಬಗೆಹರಿಸಲಾಗುವುದು. ಬಗರ್‌ಹುಕುಂ ಹಾಗೂ ಸಾಗುವಳಿ ಚೀಟಿ ನೀಡುವಂತೆ ಅರ್ಜಿಗಳು ಸಲ್ಲಿಕೆಯಾಗಿದ್ದು, ಈಗಾಗಲೇ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಶಾಸಕರ ಅಧ್ಯಕ್ಷತೆಯಲ್ಲಿ ಸಮಿತಿ ರಚನೆಯಾದ ತಕ್ಷಣವೇ ಅರ್ಜಿಗಳನ್ನು ವಿಲೇಪಡಿಸಲು ಕ್ರಮಕೈಗೊಳ್ಳಲಾಗುವುದು ಎಂದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಮಾತನಾಡಿ, ಗ್ರಾಮ ಪಂಚಾಯಿತಿಗೆ ಸಂಬಂಧಪಟ್ಟಂತೆ ಅಹವಾಲುಗಳನ್ನು ಪರಿಹರಿಸಲು ಪ್ರತ್ಯೇಕವಾಗಿ ಆಗಮಿಸಿ, ಖುದ್ದು ಪರಿಶೀಲಿಸಿ ಸಮಸ್ಯೆಗಳನ್ನು ಬಗೆಹರಿಸುತ್ತೇನೆ. ಗ್ರಾಮದ ಸಮಸ್ಯೆಗಳ ಬಗ್ಗೆ ಸಮಗ್ರವಾಗಿ ಪಟ್ಟಿ ತಯಾರಿಸಿ, ಸರ್ಕಾರದ ಮಟ್ಟದಲ್ಲಿ ಪರಿಹಾರ ಆಗುವ ಕೆಲಸಗಳಿಗೆ ಸರ್ಕಾರದ ಗಮನ ಸೆಳೆಯಲು ಶಾಸಕರನ್ನು ಕೋರಲಾಗುವುದು. ಜಿಲ್ಲಾ ಪಂಚಾಯಿತಿಯ ಎಲ್ಲಾ ಅಧಿಕಾರಿಗಳು ಗ್ರಾಮಕ್ಕೆ ಆಗಮಿಸುವರು. ವಾರದೊಳಗೆ ಪರಿಹಾರ ನೀಡಲಾಗುವುದು ಎಂದು ಹೇಳಿದ ಅವರು, ಗ್ರಾಮದ ತ್ಯಾಜ್ಯ ವಿಲೇವಾರಿ ಘಟಕ ನಿರ್ಮಾಣಕ್ಕೆ ಶೀಘ್ರವೇ ಭೂಮಿ ಮಂಜೂರು ಮಾಡಲಾಗುವುದು ಎಂದರು.

ವಿವಿಧ ಸೌಲಭ್ಯಗಳ ವಿತರಣೆ: ತಾಲ್ಲೂಕು ಮಟ್ಟದ ಜನತಾ ದರ್ಶನ ಕಾರ್ಯಕ್ರಮದ ಅಂಗವಾಗಿ ಸರ್ಕಾರದ ವಿವಿಧ ಯೋಜನೆಗಳಡಿ ಫಲಾನುಭವಿಗಳಿಗೆ ಸೌಲಭ್ಯ ವಿತರಿಸಲಾಯಿತು.


ಪುಟ ↘ 2


**ಪ್ರಮುಖ ಸುದ್ದಿ**

# ದೊಡ್ಡ ಉಳ್ಳಾರ್ತಿ: 10 ಲಕ್ಷ ವೆಚ್ಚದಲ್ಲಿ ನೂತನ ಬಸ್ ನಿಲ್ದಾಣಕ್ಕೆ ಭೂಮಿ ಪೂಜೆ

» **ಚಳ್ಳಕೆರೆ**

ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರವ್ಯಾಪ್ತಿಯ ದೊಡ್ಡ ಉಳ್ಳಾರ್ತಿ ಗ್ರಾಮದಲ್ಲಿ ಸುಮಾರು 10 ಲಕ್ಷ ವೆಚ್ಚದಲ್ಲಿ ನೂತನ ಬಸ್ಟಾಂಡ್ ನಿರ್ಮಾಣ ಕಾಮಗಾರಿಗೆ ಕ್ಷೇತ್ರದ ಶಾಸಕ ಎನ್.ವೈ.ಗೋಪಾಲಕೃಷ್ಣ ಭೂಮಿಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಪ್ರಸ್ತುತ ಮುಖ್ಯಮಂತ್ರಿ ಎಸ್.ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ ಜನಪರ ಆಡಳಿತದೊಂದಿಗೆ ಅಭಿವೃದ್ಧಿ ಪರ್ವವನ್ನು ಸಹ ರೂಪಿಸಲು ಹೊರಟಿದೆ. ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯಡಿ ಸುಮಾರು 10 ಲಕ್ಷ ವೆಚ್ಚದಲ್ಲಿ ಗ್ರಾಮದ ಬಸ್ಟಾಂಡ್‌ನಲ್ಲಿ ನೂತನ ಬಸ್ ನಿಲ್ದಾಣ ನಿರ್ಮಿಸಲು ಸಾರ್ವಜನಿಕರಿಂದ ಹಲವಾರು ಬಾರಿ ಮನವಿ ಅರ್ಪಿಸಿದ ಹಿನ್ನೆಲೆಯಲ್ಲಿ ಈ ದಿನ ಭೂಮಿ ಪೂಜೆ ನೇರವೇರಿಸಲಾಗಿದೆ. ಗ್ರಾಮದಲ್ಲಿ ಗ್ರಾಮ ದೇವತೆ ಶ್ರೀದೊಡ್ಡ ಉಳ್ಳಾರ್ತಿ ಗೌರಿದೇವಿ ಜಾತ್ರೆಯೂ ಆರಂಭವಾಗಿದೆ. ಕಾಮಗಾರಿಯನ್ನು ಆದಷ್ಟು ಬೇಗ ಪೂರ್ಣಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಈಗಾಗಲೇ ಕಟ್ಟುನಿಟ್ಟಿನ ಸೂಚನೆ ನೀಡಿದ್ದೇನೆ. ಗುಣಮಟ್ಟದ ಕಾಮಗಾರಿಗೆ ಆದ್ಯತೆ ನೀಡುವಂತೆಯೂ ತಿಳಿಸಿದ್ದೇನೆ ಎಂದರು.

ಗ್ರಾಮ ಪಂಚಾಯಿತಿ ಅಧ್ಯಕ್ಷೆ ಕರಿಯಮ್ಮ, ಪಂಚಾಯಿತಿ ಸದಸ್ಯೆ ಟಿಎಸ್‌ಟಿ ಪುಟ್ಟಕ್ಕ, ಪಿಡಿಒ ಯೋಗೇಶ್, ಗ್ರಾಮ ಮುಖಂಡರಾದ ರಾಜು ಮುಂತಾದವರು ಉಪಸ್ಥಿತರಿದ್ದರು.



ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರದ ದೊಡ್ಡ ಉಳ್ಳಾರ್ತಿ ಗ್ರಾಮದಲ್ಲಿ ಸುಮಾರು 10 ಲಕ್ಷ ವೆಚ್ಚದಲ್ಲಿ ನೂತನ ಬಸ್ಟಾಂಡ್ ನಿರ್ಮಾಣಕ್ಕೆ ಕ್ಷೇತ್ರದ ಶಾಸಕ ಎನ್.ವೈ.ಗೋಪಾಲಕೃಷ್ಣ ಭೂಮಿಪೂಜೆ ನೆರವೇರಿಸಿದರು.





## ಫಾಸ್ಟ್ ನ್ಯೂಸ್

### ಅಪ್ರೆಂಟಿಸ್ ತರಬೇತಿಗೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಚಿತ್ರದುರ್ಗ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಪತ್ರಿಕೋದ್ಯಮ ಪದವೀಧರರಿಗೆ 12 ತಿಂಗಳ ಅವಧಿಯ ಅಪ್ರೆಂಟಿಸ್ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿದೆ.ಮಾಧ್ಯಮ ಕ್ಷೇತ್ರದಲ್ಲಿ ಮತ್ತು ಮಾಧ್ಯಮ ಚಟುವಟಿಕೆಗಳ ಕಾರ್ಯನಿರ್ವಹಣೆ ಕುರಿತು ನೀಡುವ 12 ತಿಂಗಳ ಅಪ್ರೆಂಟಿಸ್ ತರಬೇತಿಗಾಗಿ ಪತ್ರಿಕೋದ್ಯಮದಲ್ಲಿ ಪದವಿ ಅಥವಾ ಸ್ನಾತಕೋತ್ತರ ಪದವಿ ಪೂರ್ಣಗೊಳಿಸಿರುವ ಹಾಗೂ ಕಂಪ್ಯೂಟರ್ ಜ್ಞಾನವಿರುವ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳಿಗೆ 35 ವರ್ಷ ಮೀರಿರಬಾರದು. ಅರ್ಜಿ ಸಲ್ಲಿಸಿದ ಸಂದರ್ಭದಲ್ಲಿ ಅಭ್ಯರ್ಥಿಗಳು ಪದವಿಯ ಎಲ್ಲ ವರ್ಷಗಳ ಅಂಕಪಟ್ಟಿಗಳು, ಸ್ನಾತಕೋತ್ತರ ಪದವಿಯ ಎಲ್ಲ ಅಂಕಪಟ್ಟಿಯೊಂದಿಗೆ ಅರ್ಜಿಸಲ್ಲಿಸಬೇಕು. ಅಂಕಪಟ್ಟಿಯನ್ನು ನಿರೀಕ್ಷಿಸಿ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. ತರಬೇತಿಯ ಅವಧಿ ವೇಳೆ ಮಾಹೆಯಾನ 15,000/- ರೂ. ಗಳ ಸ್ಟೈಫೆಂಡ್ ನೀಡಲಾಗುವುದು. ತರಬೇತಿಯು 12 ತಿಂಗಳ ಅವಧಿಯದಾಗಿದ್ದು, ತಾತ್ಕಾಲಿಕವಾಗಿರುತ್ತದೆ. ತರಬೇತಿ ಮುಗಿದ ನಂತರ ಮುಂದುವರೆಸಲು ಅಥವಾ ಖಾಯಂಗೊಳಿಸಲು ಯಾವುದೇ ಅವಕಾಶ ಇರುವುದಿಲ್ಲ. ತರಬೇತಿಯ ಅವಧಿಯಲ್ಲಿ ತರಬೇತಾರ್ಥಿಗಳು ಬೇರೆ ಉದ್ಯೋಗ ಮಾಡುವಂತಿಲ್ಲ. ತರಬೇತಿಯ ಅವಧಿಯ ಮಧ್ಯದಲ್ಲಿ ಬಿಟ್ಟು ಹೋದರೆ, ಮೂಲ ದಾಖಲಾತಿಗಳನ್ನು ಅವಧಿಗೆ ಮುನ್ನ ಹಿಂದುರುಗಿಸುವುದಿಲ್ಲ. ಅರ್ಜಿ ಸಲ್ಲಿಸಲು ಡಿಸೆಂಬರ್ 04 ಕೊನೆಯ ದಿನವಾಗಿದ್ದು, ಆಸಕ್ತರು ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗೆ ಸಹಾಯಕ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾಧಿಕಾರಿಗಳ ಕಚೇರಿ ಆವರಣ, ಚಿತ್ರದುರ್ಗ ಇವರನ್ನು ಸಂಪರ್ಕಿಸಬಹುದು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ತುಕಾರಾಂರಾವ್ ಬಿ.ವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 1 ರಂದು ಶಾಲಾ ಶಿಕ್ಷಕರಿಗೆ ಯೋಗ ತರಬೇತಿ

» **ಚಿತ್ರದುರ್ಗ**

ಆಯುಷ್ ಇಲಾಖೆ, ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ಸಹಯೋಗದಲ್ಲಿ ಶಾಲಾ ಶಿಕ್ಷಕರಿಗೆ ಯೋಗ ತರಬೇತಿ ಕಾರ್ಯಕ್ರಮ ಡಿ.1 ರಂದು ಬೆಳಿಗ್ಗೆ 10 ಗಂಟೆಗೆ ಹಿರಿಯೂರು ತಾಲ್ಲೂಕಿನ ಬಬ್ಬೂರು ಫಾರಂ ರೈತ ತರಬೇತಿ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದೆ.ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವರು ಹಾಗೂ ಸಂಸದರಾದ ಎ. ನಾರಾಯಣಸ್ವಾಮಿ ಘನ ಉಪಸ್ಥಿತಿ ವಹಿಸುವವರು. ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು. ಗೌರವಾನ್ವಿತ ಆಹ್ವಾನಿತರಾಗಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ. ಅನ್ವರ್ ಭಾಷಾ, ಬಬ್ಬೂರು ಗ್ರಾಮ ಪಂಚಾಯಿತಿ ಅಧ್ಯಕ್ಷ ಪಿ. ಕರಿಯಣ್ಣ ಅಧ್ಯಕ್ಷತೆ ವಹಿಸುವರು.ಮುಖ್ಯ ಅತಿಥಿಗಳಾಗಿ ಶಾಸಕರಾದ ಟಿ.ರಘುಮೂರ್ತಿ, ಎನ್.ವೈ.ಗೋಪಾಲಕೃಷ್ಣ, ಡಾ.ಎಂ.ಚಂದ್ರಪ್ಪ, ಬಿ.ಜಿ. ಗೋವಿಂದಪ್ಪ, ಕೆ.ಸಿ. ವೀರೇಂದ್ರ ಪಪ್ಪಿ, ವಿಧಾನ ಪರಿಷತ್ ಸದಸ್ಯರಾದ ಡಾ.ವೈ.ಎ ನಾರಾಯಣಸ್ವಾಮಿ, ಚಿದಾನಂದ ಎಂ. ಗೌಡ, ಕೆ.ಎಸ್. ನವೀನ್, ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ಹೇಮಾಮಾಲಿನಿ ಕುಮಾರ್, ಗ್ರಾಮ ಪಂಚಾಯಿತಿ ಸದಸ್ಯರಾದ ವಿ. ಅರುಣ್ ಕುಮಾರ್, ಮಂಜುಳ ನಾಗೇಂದ್ರಪ್ಪ, ಕ್ಷೇತ್ರಶಿಕ್ಷಣಾಧಿಕಾರಿ ಸಿ.ಎಂ. ತಿಪ್ಪೇಸ್ವಾಮಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ. ರವಿಶಂಕರ ರೆಡ್ಡಿ, ಆಯುಷ್ ಇಲಾಖೆ ಆಯುಕ್ತರಾದ ಕೆ. ಲೀಲಾವತಿ ಸೇರಿದಂತೆ ಚುನಾಯಿತ ಜನ ಪ್ರತಿನಿಧಿಗಳು ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

### ಅರ್ಜಿ ಆಹ್ವಾನ

» **ಚಿತ್ರದುರ್ಗ**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1ರ ಅಲೆಮಾರಿ ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಶುಲ್ಕ ಮರುಪಾವತಿ ಮತ್ತು ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ. ಅರ್ಜಿ ಸಲ್ಲಿಸಲು 2024 ರ ಜನವರಿ 10 ಕೊನೆ ದಿನವಾಗಿದೆ. ಜಿಲ್ಲೆಯ ಅರ್ಹ ವಿದ್ಯಾರ್ಥಿಗಳು https://ssp.postmatric.karnataka.gov.in ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ https://bcwd.karnataka.gov.in ವೆಬ್‌ಸೈಟ್ ಸಂಪರ್ಕಿಸಬಹುದು.ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 8050770005 ಗೆ ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

### ನಾಗತಿಹಳ್ಳಿಮಂಜುನಾಥ್ ಅವರ ಹೊನ್ನಾರ ಕೃತಿ ಬಿಡುಗಡೆ ಸಮಾರಂಭದಲ್ಲಿ ಹೆಚ್ ಬಿಲ್ಲಪ್ಪ ಕರೆ

# ಕನ್ನಡ ಸರ್ವ ಜನಾಂಗದ ಸುಂದರ ತೋಟ ಮಾಡಬೇಕು

» **ಹೊಸದುರ್ಗ**

ಶ್ರೇಷ್ಠ ಜೀವನ ಕೊಡುವ ಉದ್ದೇಶದಿಂದ ಮಕ್ಕಳಿಗೆ ಶಿಕ್ಷಣ ನೀಡಲಾಗುತ್ತಿದೆ. ಶಿಕ್ಷಣ ಪಡೆದ ಮಕ್ಕಳು ಸತ್ಯವಂತರಾಗಿ, ಕತ್ತಲಿನಿಂದ ಬೆಳಕಿನೆಡೆಗೆ ಹೋಗಬೇಕು. ಕನ್ನಡವನ್ನು ಸರ್ವ ಜನಾಂಗದ ಸುಂದರ ತೋಟ ಮಾಡಬೇಕು. ಕನ್ನಡ ನಾಡು ನುಡಿ. ಕರ್ನಾಟಕದ ನೆಲ ಜಲ ನಮ್ಮದೆಂಬ ಭಾವನೆ ಪ್ರತಿಯೊಬ್ಬರಲ್ಲೂ ಇರಬೇಕು ಎಂದು ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಹೆಚ್ ಬಿಲ್ಲಪ್ಪ ಕರೆ ನೀಡಿದರು.

ತಾಲ್ಲೂಕಿನ ಮತ್ತೋಡು ಸಿದ್ಧಗೊಂಡನಹಳ್ಳಿಯ ಸನ್ ಶೈನ್ ಪಬ್ಲಿಕ್ ಸ್ಕೂಲ್ ಆವರಣದಲ್ಲಿ ಆಯೋಜಿಸಿದ್ದ 'ಕನ್ನಡ ರಾಜ್ಯೋತ್ಸವ ಮತ್ತು ಸಾಹಿತಿ ಹಾಗು ಕವಿ ನಾಗತಿಹಳ್ಳಿಮಂಜುನಾಥ್ ಹೊನ್ನಾರ ಪುಸ್ತಕ ಬಿಡುಗಡೆ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಕನ್ನಡ ಭಾಷೆ ಬಗ್ಗೆ ಕೀಳರಿಮೆ ಬೇಡ. ನಾವು ಬದುಕುವ ಭಾಷೆಯದು. ಹಲವರಿಗೆ ಬದುಕು ನೀಡಿರುವ ಶ್ರೀಮಂತ ಭಾಷೆ ಕನ್ನಡ ಎಂದು ಕನ್ನಡದ ಬಗ್ಗೆ ಅಭಿಮಾನ ವ್ಯಕ್ತಪಡಿಸಿದರು.

ಹೊನ್ನಾರ ಕೃತಿ ಬಿಡುಗಡೆ ಮಾಡಿದ ನಿವೃತ್ತ ಡಿಡಿಪಿಐ ಎನ್ ಎಂ ರಮೇಶ್ ಮಾತನಾಡಿ ಶಾಲೆಯ ಕಟ್ಟಡ ಸುಂದರವಾಗಿದ್ದಾರೆ ಸಾಲದು ಅಲ್ಲಿ ಗುಣಾತ್ಮಕವಾದ ಶಿಕ್ಷಣ ನೀಡುವ ಕೆಲಸ ಆಗಬೇಕು. ಮಕ್ಕಳಿಗೆ ಕೇವಲ ಪಠ್ಯ ಶಿಕ್ಷಣಕ್ಕೆ ಹೆಚ್ಚು ಒತ್ತು ಕೊಡುವುದರ ಜೊತೆಗೆ ಮಕ್ಕಳಲ್ಲಿರುವ ಕಲೆ ಪ್ರತಿಭೆಯನ್ನು ಹೊರತರುವ ಕೆಲಸವನ್ನು ಶಿಕ್ಷಕರು ಮಾಡಬೇಕಿದೆ. ಮಕ್ಕಳು ಹತ್ತು ಭಾಷೆ ಕಲಿಯಲಿ ಆದರೆ ಮಾತೃ ಭಾಷೆಯ ಬಗ್ಗೆ ಅಭಿಮಾನ ಪ್ರೀತಿ ಇರಲಿ ಎಂದರು.







> ವಿದ್ಯಾರ್ಥಿ ದೆಸೆಯಲ್ಲಿ ಕುವೆಂಪು ಹಾಗೂ ದಾ.ರಾ. ಬೇಂದ್ರ ಸೇರಿದಂತೆ ಹಲವರ ಸಾಹಿತ್ಯ ಅಧ್ಯಯನದಿಂದಾಗಿ ಕವನ ಬರೆಯಲು ಆರಂಭಿಸಿದೆ.
>
> » **ನಾಗತಿಹಳ್ಳಿಮಂಜುನಾಥ್, ಸಾಹಿತಿ ಹೊಸದುರ್ಗ**

> ನಾಗತಿಹಳ್ಳಿಮಂಜುನಾಥ್ ಹಾಸ್ಯ ಪ್ರಜ್ಞೆಯುಳ್ಳ ಕವಿ ಈತ ಮುಗ್ಧ ಕೂಡ ಹೌದು ಆ ಮುಗ್ಧತೆ ಇಂದಿನವರೆಗೆ ಈತನನ್ನು ಕಾವ್ಯ ಕ್ಷೇತ್ರದಲ್ಲಿ ಉಳಿಸಿಕೊಂಡಿದೆ. ಈತನ ಪದ್ಯಗಳನ್ನು ಕಾವ್ಯ ಸೂತ್ರದಿಂದ ನೋಡುವ ಬದಲು ಅದರ ಅಂತತ್ವದಿಂದ ತೂಗುವುದೇ ಮೇಲು ಮೊದಲಿಗೆ ಈ ಹೊನ್ನಾರ ಶೀರ್ಷಿಕೆಯೇ ಚಂದವಾದದ್ದು. ಯಾರಿಗಾದರೂ ಹೊನ್ನಾರ ಎಂಬ ಹೆಸರು ಕೇಳಿದ ತಕ್ಷಣ ಇದು ಕೃಷಿಗೆ ಸಂಬಂಧಿಸಿದ ಪುಸ್ತಕವಿರಬಹುದು ಎಂದೆನಿಸದಿರದು. ಆದರೆ ಇದರಲ್ಲಿ ಎಲ್ಲಾ ರೀತಿಯ ಪದ್ಯಗಳನ್ನು ನೋಡಬಹುದಾಗಿದೆ ಪ್ರಕೃತಿ ಪ್ರೀತಿ, ಇತಿಹಾಸ, ನೋವು,ನಿರಾಶೆ ಕರುಣೆ,ಕನ್ನಡ ಇವೇ ಮೊದಲಾದ ವಿಷಯ ವಸ್ತುಗಳು ಮತ್ತೆ ಮತ್ತೆ ಮರುಕಳಿಸುತ್ತಾ ವರೆಸಿಕೊಂಡು ಹೋಗಿವೆ ನಾಗತಿಹಳ್ಳಿಮಂಜುನಾಥ್ ಅವರು ಇನ್ನೂ ಹೆಚ್ಚಿನದಾಗಿ ಕಾವ್ಯ ಸೂತ್ರಗಳ ಬಗ್ಗೆ ಅಧ್ಯಯನ ನಡೆಸಬೇಕಿದೆ ಈಗಾಗಲೇ ಹೆಸರು ಮಾಡಿದ ಕವಿಗಳನ್ನ ಓದಿಕೊಳ್ಳಬೇಕಿದೆ. ಮುಂದೆ ಅವರು ಇನ್ನೂ ಉತ್ತಮ ಕವಿಯಾಗಲಿ.
>
> » **ಧನಂಜಯ ಮೆಂಗಸಂದ್ರ ,ನಿಕಟಪೂರ್ವ ಅಧ್ಯಕ್ಷ ತಾಲೂಕು ಕ.ಸಾ.ಪ ಪರಿಷತ್ತು,ಹೊಸದುರ್ಗ**

ಹೊನ್ನಾರ ಕೃತಿಯ ಲೇಖಕ ನಾಗತಿಹಳ್ಳಿ ಮಂಜುನಾಥ್ ಮಾತನಾಡಿ, ಹಲವು ವರ್ಷಗಳ ಪ್ರಯತ್ನದಿಂದಾಗಿ, ಸ್ನೇಹಿತರು, ಹಿತೈಷಿಗಳ ಸಹಕಾರದಿಂದ ಹೊನ್ನಾರ ಪುಸ್ತಕ ಬಿಡುಗಡೆಗೊಂಡಿದೆ. ವಿದ್ಯಾರ್ಥಿ ದೆಸೆಯಲ್ಲಿ ಕುವೆಂಪು ಹಾಗೂ ದಾ.ರಾ. ಬೇಂದ್ರ ಸೇರಿದಂತೆ ಹಲವರ ಸಾಹಿತ್ಯ ಅಧ್ಯಯನದಿಂದಾಗಿ ಕವನ ಬರೆಯಲು ಆರಂಭಿಸಿದೆ. ರೈತರು ಬೇಸಾಯದ ಆರಂಭದಲ್ಲಿ ಹೊನ್ನಾರ ಹೂಡಿ, ನಂತರ ಕೃಷಿ ಚಟುವಟಿಕೆ ಆರಂಭಿಸುತ್ತಾರೆ. ಅದೇ ರೀತಿ ಚೊಚ್ಚಲ ಕವನ ಸಂಕಲನಕ್ಕೆ 'ಹೊನ್ನಾರ' ಎಂದು ಹೆಸರಿಡಲಾಗಿದೆ ಎಂದರು.ತಾಲೂಕು.ಕ.ಸಾ.ಪ ನಿಕಟ ಪೂರ್ವ ಅಧ್ಯಕ್ಷ ಧನಂಜಯಮೆಂಗಸಂದ್ರ ಹೊನ್ನಾರ ಕೃತಿ ಕುರಿತು ಉಪನ್ಯಾಸ ನೀಡಿದರು.ಸುಜ್ಞಾನ ಎಜುಕೇಶನ್ ಟ್ರಸ್ಟ್ ಅಧ್ಯಕ್ಷ ಎಂ. ಶಿವಲಿಂಗಪ್ಪ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಕ.ಸಾ.ಪ ಪ್ರಧಾನ ಕಾರ್ಯಧರ್ಶಿ ಹುರುಳಿ ಎಂ.ಬಸವರಾಜ್,ಹಿರಿಯ ಪತ್ರಕರ್ತ ಎನ್.ಕೆ.ತಿಪ್ಪೇಸ್ವಾಮಿ(ನಾಗತಿಹಳ್ಳಿ) ಕಸಾಪ ತಾಲ್ಲೂಕುಘಟಕದಅಧ್ಯಕ್ಷಬಿ.ಪಿ.ಓಂಕಾರಪ್ಪ, ಮಾಜಿ ಅಧ್ಯಕ್ಷರುಗಳಾದ ಬಾ.ಮೈಲಾರಪ್ಪ, ಹೋ.ಮ.ರಾಜಣ್ಣ, ಕಸಾಪ ಮತ್ತೋಡು ಹೋಬಳಿ ಅಧ್ಯಕ್ಷ ರಮೇಶ್,ಹೊನ್ನೇನ 'ಹಳ್ಳಿಮಂಜುನಾಥ್, ಕವಿಯತ್ರಿ ಕುಮಾರಿ ಎಂ.ಆರ್. ನಳಿನ, ಸೌಮ್ಯಕುಮಾರಿ, ಯುವ ಕವಿ ಲಕ್ಷ್ಮೀಸಾಗರ್, ಚಿತ್ರದುರ್ಗ ಜಗನ್ನಾಥ್, ಪತ್ರಕರ್ತರ ಸಂಘದ ಅಧ್ಯಕ್ಷ ಎನ್.ವಿಶ್ವನಾಥ್‌ಶ್ರೀರಾಂಪುರ, ತುಂಬಿನಕೆರೆಬಸವರಾಜ್, ಪಶು ಸಂಗೋಪನಾ ಇಲಾಖೆಯ ನಿವೃತ್ತ ನೌಕರ ತಿಪ್ಪೇಸ್ವಾಮಿ, ಆರೋಗ್ಯ ಇಲಾಖೆಯ ಹರೀಶ್‌ಮಡಿವಾಳ್ ಭಾಗವಹಿಸಿದ್ದರು.



ಚಳ್ಳಕೆರೆ ನಗರದ ಅಂಬೇಡ್ಕರನಗರದ ನಾಗರಕಟ್ಟೆ ಆಟೋನಿಲ್ದಾಣದ ಆಟೋಚಾಲಕರಿಂದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ನಡೆಸಲಾಯಿತು. ಪಿಯು ಕಾಲೇಜು ಪ್ರಾಂಶುಪಾಲ ಎಂ. ರವೀಶ್, ಜಗದೀಶ್, ಬಿ.ಶಾಂತಕುಮಾರಿ, ಪುಟ್ಟಲಿಂಗಪ್ಪ, ಹೀನಾಕೌಸರ್ ಮೊದಲಾದರು ಇದ್ದರು.



ಚಳ್ಳಕೆರೆ ನಗರದ ಚಿಗುರು ಈ-ಕಿಡ್ಸ್ ಪ್ರೀ ಸ್ಕೂಲ್‌ನಲ್ಲಿ ತರಕಾರಿ ಡೇ ಅಂಗವಾಗಿ ಪುಟ್ಟಮಕ್ಕಳು ವಿವಿಧ ತರಕಾರಿ ವೇಷದಲ್ಲಿ ಕಂಡರು. ಕಾರ್ಯದರ್ಶಿ ಜೆ.ಸಿ.ಶಶಿಕುಮಾರ್, ಸ್ಪೂರ್ತಿ ಮೊದಲಾದವರು ಇದ್ದರು.

## ಕನಕ ಜಯಂತೋತ್ಸವಗೆ ಸಿದ್ದತೆ; ಭಕ್ತಕನಕ ದಾಸ ವೃತ್ತ ನಾಮಕರಣ



» **ಚಳ್ಳಕೆರೆ**

ಭಕ್ತಕನಕದಾಸರ 536ನೇ ಜಯಂತೋತ್ಸವ ಹಾಗೂ ನಗರದ ಚಿತ್ರದುರ್ಗ ರಸ್ತೆಯಲ್ಲಿ ಹತ್ತಾರು ವರ್ಷಗಳ ಹೋರಾಟದ ಫಲವಾಗಿ ಇದೇ ಮೊದಲ ಬಾರಿಗೆ ಭಕ್ತ ಕನಕದಾಸ ವೃತ್ತ ನಾಮಕರಣ ಮತ್ತು ಭೂಮಿ ಪೂಜೆ ಕಾರ್ಯಕ್ರಮವನ್ನು ನ.30ರ ಗುರುವಾರ ಹಮ್ಮಿಕೊಂಡಿದೆ ಎಂದು ರೇವಣಸಿದ್ದೇಶ್ವರ ವಿದ್ಯಾವರ್ಧಕ ಸಂಘ ಅಧ್ಯಕ್ಷ, ಹಿರಿಯ ಸಹಕಾರಿ ದುರೀಣ ಆರ್.ಮಲ್ಲೇಶಪ್ಪ ಮನವಿ ಮಾಡಿದರು. ಅವರು ನಗರದ ಸಂಘದ ಕಚೇರಿಯಲ್ಲಿ ಏರ್ಪಡಿಸಿದ್ದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿ, ಭಕ್ತ ಕನಕದಾಸ ವೃತ್ತ ನಾಮಕರಣ ಮತ್ತು ಭೂಮಿ ಪೂಜೆ, ಕನಕದಾಸ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕ ಟಿ.ರಘುಮೂರ್ತಿ ವಹಿಸಲಿದ್ದು, ಭಕ್ತಕನಕದಾಸ ವೃತ್ತ ನಾಮಕರಣಕ್ಕೆ ಪ್ರೇರಣೆಯಾದ ಶಾಸಕರನ್ನು ಸಮುದಾಯದ ಪರವಾಗಿ ಅಭಿನಂದಿಸಲಾಯಿತು. ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಎಂ.ಜೆ. ರಾಘವೇಂದ್ರ ಮಾತನಾಡಿ, ಅಂದು ಬೆಳಗ್ಗೆ 9ಕ್ಕೆ ಚಳ್ಳಕೆರೆ ನಗರದ ನೂತನ ಭಕ್ತಕನಕದಾಸ ವೃತ್ತದಿಂದ ವಾಲ್ಮೀಕಿ ವೃತ್ತ, ಅಂಬೇಡ್ಕರ್ ವೃತ್ತ, ನೆಹರೂ ಸರ್ಕಲ್, ಕಂಬಳಿ ಮಾರುಕಟ್ಟೆ, ತಾಲ್ಲೂಕು ಕಚೇರಿ ಮುಂಭಾಗದಿಂದ ಕುರುಬರ ಸಮಾಜದ ಹಾಸ್ಟಲ್ ಮುಂಭಾಗಕ್ಕೆ ಆಗಮಿಸಿ ಕಾರ್ಯಕ್ರಮ ನಡೆಸಲಾಗುವುದು ಎಂದರು. ಉಪನ್ಯಾಸವನ್ನು ಪ್ರಾಂಶುಪಾಲ ಎಂ.ಶಿವಲಿಂಗಪ್ಪ ನೆರವೇರಿಸುವರು. ರೇವಣಸಿದ್ದೇಶ್ವರ ವಿದ್ಯಾವರ್ಧಕ ಸಂಘ 'ಕಾರ್ಯದರ್ಶಿ ಆರ್.ಲಿಂಗಪ್ಪ, ಕನಕ ನೌಕರರ ಸಂಘದ ಅಧ್ಯಕ್ಷ ಎಲ್.ರುದ್ರಮುನಿ, ಕಾರ್ಯದರ್ಶಿ ಆರ್.ಸದಾಶಿವಯ್ಯ, ಎನ್.ಬಿ.ಹನುಮಂತಪ್ಪ, ವಿ.ಮಂಜುನಾಥ, ಪರಸಪ್ಪ, ಕೆ.ಜಗಣ್ಣ, ಪಿ.ಮಹಂತಪ್ಪ ಮುಂತಾದವರು ಉಪಸ್ಥಿತರಿದ್ದರು.

## ಭರಮಸಾಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಪಠ್ಯೇತರ ಚಟುವಟಿಕೆಗಳನ್ನು ಶಾಸಕ ಡಾ.ಎಂ.ಚಂದ್ರಪ್ಪ ಉದ್ಘಾಟನೆ

» **ಹೊಳಲ್ಕೆರೆ**

ಶಿಕ್ಷಣದ ಜೊತೆ ಮಕ್ಕಳು ದೇಶಾಭಿಮಾನ ಬೆಳೆಸಿಕೊಂಡಾಗ ಮಾತ್ರ ಸದೃಢ ರಾಷ್ಟ್ರ ನಿರ್ಮಾಣ ಮಾಡಲು ಸಾಧ್ಯ ಎಂದು ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು.

ಭರಮಸಾಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಪಠ್ಯೇತರ ಚಟುವಟಿಕೆಗಳ ಉದ್ಘಾಟನಾ ಸಮಾರಂಭ ನೆರವೇರಿಸಿ ಮಾತನಾಡಿದರು. ಭಾರತ ಶಕ್ತಿಶಾಲಿ ದೇಶವಾಗಲು ಪ್ರಧಾನಿ ಮೋದಿ ಒಬ್ಬರಿಂದ ಆಗದು. ಪ್ರತಿ ಪ್ರಜೆಯೂ ದೇಶಭಕ್ತಿ ಮೂಡಿಸಿಕೊಳ್ಳಬೇಕು. ಸಣ್ಣ ರಾಷ್ಟ್ರ ಇಸ್ರೇಲ್ ಹಮಾಸ್ ಮೇಲೆ ಯುದ್ಧ ನಡೆಸುತ್ತಿದೆ. ಇಸ್ರೇಲ್‌ನಲ್ಲಿ ಪ್ರತಿಯೊಬ್ಬರು ಶಿಕ್ಷಣ ಮುಗಿಸಿದ ನಂತರ ಕಡ್ಡಾಯವಾಗಿ ಸೇನೆಯಲ್ಲಿ ಸೇವೆ ಸಲ್ಲಿಸಬೇಕೆಂಬ ನಿಯಮವಿದೆ. ಇಸ್ರೇಲ್‌ನ ಪ್ರಜೆಗಳು ಬೇರೆ ಬೇರೆ ದೇಶಗಳಲ್ಲಿದ್ದಾರೆ. ಆದರೆ ಯುದ್ಧ ಆರಂಭವಾದಾಗ ಸ್ವಯಂಪ್ರೇರಿತವಾಗಿ




ಯುದ್ದದಲ್ಲಿ ಪಾಲ್ಗೊಳ್ಳಲು ಇಸ್ರೇಲ್‌ಗೆ ಮರಳುತ್ತಿದ್ದುದನ್ನು ನೀವುಗಳೆಲ್ಲಾ ಕೇಳಿದ್ದೀರ. ಅಂತಹ ದೇಶಪ್ರೇಮವನ್ನು ಬೆಳೆಸಿಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ನಮ್ಮ ದೇಶದ ಪ್ರಧಾನಿ ಮೋದಿರವರ ಆಡಳಿತ ಬಿಗಿಯಾಗಿರುವುದರಿಂದ ಬೇರೆ ದೇಶಗಳು ಭಾರತದ ಮೇಲೆ ಯುದ್ದಕ್ಕೆ ಬರಲು ಹೆದರುತ್ತವೆ. ಕೊರೋನಾದಂತ ಸಂಕಷ್ಟದ ಪರಿಸ್ಥಿತಿಯಲ್ಲಿ ಎಂಬತ್ತು ಕೋಟಿ ಜನರಿಗೆ ಮೂರು ವರ್ಷಗಳಿಂದ ಮೋದಿ ಉಚಿತವಾಗಿ ಅಕ್ಕಿಯನ್ನು ಪೂರೈಸುತ್ತಿದ್ದಾರೆ. ಸಾರ್ವಜನಿಕರ ಮಧ್ಯೆಯಿದ್ದುಕೊಂಡು ಕೆಲಸ ಮಾಡುತ್ತಿರುವುದರಿಂದ ಕ್ಷೇತ್ರದ ಜನ ನನ್ನನ್ನು ಐದನೆ ಬಾರಿಗೆ ಗೆಲ್ಲಿಸಿದ್ದಾರೆ. 89 ಕೋಟಿ ರೂ.ವೆಚ್ಚದಲ್ಲಿ ಹಿರಿಯೂರಿನ ವಾಣಿವಿಲಾಸಸಾಗರದಿಂದ ನೀರು ತಂದು ಈ ಭಾಗದ ಜನರಿಗೆ ಪೂರೈಸಲಾಗುತ್ತಿದೆ. ಹೊಳಲ್ಕೆರೆ ಪಟ್ಟಣದಲ್ಲಿ 30 ಕೋಟಿ ರೂ.ವೆಚ್ಚದಲ್ಲಿ ಸ್ಟೇಡಿಯಂ ಕಟ್ಟಿಸಲಾಗುತ್ತಿದೆ. ಒಳಾಂಗಣ ಕ್ರೀಡಾಂಗಣ, ಈಜುಕೊಳ ನಿರ್ಮಿಸಲಾಗಿದೆ. ಮಕ್ಕಳ ಮುಂದಿನ ಭವಿಷ್ಯವನ್ನು ದೃಷ್ಟಿಯಲ್ಲಿಟ್ಟುಕೊಂಡು ಹೆಜ್ಜೆ ಇಡುತ್ತಿದ್ದೇನೆ ಎಂದರು. ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಡಿ.ವಿ.ಶರಣಪ್ಪ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಚಾರ್ಯರಾದ ಶ್ರೀಮತಿ ಡಾ.ಶಶಿಕಲಾ ಎಸ್. ಕೆ.ಕಲ್ಲೇಶ್, ಶ್ರೀಮತಿ ಕರಿಯಮ್ಮ ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

# ಜನರ ಸಮಸ್ಯೆ ಪರಿಹಾರಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡಿ

» **ಮೊದಲ ಪುಟದಿಂದ**

ಕಂದಾಯ ಇಲಾಖೆಯಿಂದ ಪಿಂಚಣಿ ಆದೇಶ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಭಾಗ್ಯಲಕ್ಷ್ಮಿ ಬಾಂಡ್, ಸುಕನ್ಯಾ ಸಮೃದ್ಧಿ ಯೋಜನೆ ಪಾಸ್‌ಬುಕ್ ವಿತರಣೆ, ಕಾರ್ಮಿಕ ಇಲಾಖೆಯಿಂದ ಹೆರಿಗೆ ಬಾಂಡ್, ವಸತಿ ಯೋಜನೆಯಡಿ ಕಾರ್ಯಾದೇಶ, ರೇಷ್ಮೆ ಇಲಾಖೆಯಿಂದ ರೇಷ್ಮೆಹುಳು ಸಾಕಾಣಿಕೆ ಮನೆಕಟ್ಟಲು ಸಹಾಯಧನ, ಪಶು ಇಲಾಖೆಯಿಂದ ಕುರಿಗಳಿಗೆ ಜಂತುನಾಶಕ ಔಷಧಿ, ರೈತರಿಗೆ ಮೇವಿನಬೀಜದ ಕಿಟ್ ವಿತರಣೆ, ಕೃಷಿ ಇಲಾಖೆಯಿಂದ ಸ್ಪ್ರಿಂಕ್ಲರ್ ಸೆಟ್ ವಿತರಣೆ, ಅಂಗವಿಕಲರಿಗೆ ಸೈಕಲ್ ಹಾಗೂ ಶ್ರವಣಸಾಧನ ವಿತರಣೆ ವಿತರಿಸಲಾಯಿತು.

ಸಮಸ್ಯೆಗಳಿಗೆ ಪರಿಹಾರದ ಸ್ಪಂದನೆ : ಕುರುಮರಡಿಕೆರೆ ಗ್ರಾಮದಲ್ಲಿ ಜರುಗಿದ ಜನತಾ ದರ್ಶನದಲ್ಲಿ ಸಾರ್ವಜನಿಕರು ಹಲವು ಸಮಸ್ಯೆಗಳ ಕುರಿತು ಶಾಸಕ ಕೆ.ಸಿ.ವೀರೇಂದ್ರ ಪ್ಪಪ್ಪಿ ಅವರಲ್ಲಿ ಹೇಳಿಕೊಂಡರು.

ವೃದ್ಧೆಯೊಬರು ಮಾತನಾಡಿ ಗ್ರಾಮದ ಉಪ ಆರೋಗ್ಯಕೇಂದ್ರದಲ್ಲಿ ವೈದ್ಯಕೀಯ ಸಿಬ್ಬಂದಿಯ ಕೊರತೆಯಿದೆ. ವಯಸ್ಸಾದವರು ಚಿಕಿತ್ಸೆಗಾಗಿ ಚಿತ್ರದುರ್ಗ



ನಗರಕ್ಕೆ ಹೋಗಿ ಬರಬೇಕಾದ ಪರಿಸ್ಥಿತಿ ಎದುರಾಗಿದೆ ಎಂದರು. ಆರೋಗ್ಯ ಕೇಂದ್ರಕ್ಕೆ ನಿವಾಸಿ ವೈದ್ಯಾಧಿಕಾರಿ ನೇಮಕ ಮಾಡಿ, ವೈದ್ಯಕೀಯ ಸಿಬ್ಬಂದಿ ಗ್ರಾಮದಲ್ಲಿಯೇ ಇದ್ದು ಜನರ ಆರೋಗ್ಯ ಸಮಸ್ಯೆಗಳಿಗೆ ಚಿಕಿತ್ಸೆ ನೀಡುವ ವ್ಯವಸ್ಥೆ ಮಾಡಬೇಕು ಎಂದು ಶಾಸಕರಲ್ಲಿ ಕೋರಿಕೊಂಡರು. ಇದಕ್ಕೆ ತಕ್ಷಣವೇ ಸ್ಪಂದಿಸಿದ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ, ಸಮಸ್ಯೆಯ ಕುರಿತು ತಾಲ್ಲೂಕು ವೈದ್ಯಾಧಿಕಾರಿ ಡಾ.ಬಿ.ವಿ.ಗೀರಿಶ್ ಅವರನ್ನು ವೇದಿಕೆ ಮೇಲೆ ಕರೆಯಿಸಿ ಪ್ರಶ್ನಿಸಿದರು. 'ಗ್ರಾಮದ ಉಪಆರೋಗ್ಯ ಕೇಂದ್ರದಲ್ಲಿ ಸಮುದಾಯ ಆರೋಗ್ಯ ಅಧಿಕಾರಿ ಹಾಗೂ ಸಹಾಯ ಸಿಬ್ಬಂದಿಗಳು ಇದ್ದಾರೆ. ಇವರು ಪ್ರತಿನಿತ್ಯ ಸುತ್ತಮುತ್ತಲಿನ ಹಳ್ಳಿಗಳಿಗೂ ತೆರಳಿ ಜನರ ಆರೋಗ್ಯ ತಪಾಸಣೆ ನಡೆಸುವರು ಹಾಗಾಗಿ ಉಪ ಆರೋಗ್ಯಕೇಂದ್ರದಲ್ಲಿ ಸಂಪೂರ್ಣ ಕಾರ್ಯನಿರ್ವಹಿಸುವ ವೈದ್ಯಾಧಿಕಾರಿ ಇಲ್ಲಾ ಎಂಬುದನ್ನು ತಾಲ್ಲೂಕು ವೈದ್ಯಾಧಿಕಾರಿ ಡಾ.ಬಿ.ವಿ. ಗೀರಿಶ್ ತಿಳಿಸಿದರು. ಕುರುಮರಡಿಕೆರೆ ಉಪ ಆರೋಗ್ಯಕೇಂದ್ರಕ್ಕೆ ವಾರದಲ್ಲಿ ಪೂರ್ಣ ಪ್ರಮಾಣದ ವೈದ್ಯಾಧಿಕಾರಿ ಹಾಗೂ ಸಿಬ್ಬಂದಿಯನ್ನು ನೇಮಿಸುವಂತೆ ಶಾಸಕ ಕೆ.ಸಿ.ವೀರೇಂದ್ರಪಪ್ಪಿ ಸೂಚಿಸಿದರು.

ಗ್ರಾಮದ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಕುರುಮರಡಿಕೆರೆ ಹಾಗೂ ಚಿತ್ರದುರ್ಗದ ನಡುವೆ ಹೆಚ್ಚಿನ ಸಾರಿಗೆ ಬಸ್ ಸಂಚಾರಕ್ಕೆ ಗ್ರಾಮಸ್ಥರು ಮನವಿ ಮಾಡಿದರು. ನಾಳೆಯಿಂದಲೇ ಬಸ್ ಸಂಚಾರ ಆರಂಭಿಸುವಂತೆ ಹಾಗೂ ವಿದ್ಯಾರ್ಥಿಗಳ ಅನುಕೂಲಕ್ಕೆ ಬಸ್ ವೇಳಾ ಪಟ್ಟಿಯನ್ನು ಬದಲಿಸುವಂತೆ ಕರ್ನಾಟಕ ರಾಜ್ಯ ಸಾರಿಗೆ ಅಧಿಕಾರಿಗಳಿಗೆ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಸ್ಥಳದಲ್ಲಿಯೇ ನಿರ್ದೇಶನ ನೀಡಿದರು.

ಪಶುವೈದ್ಯರು ಸೋಮವಾರ ಮಾತ್ರ ಗ್ರಾಮಕ್ಕೆ ಬರುತ್ತಾರೆ ಎಂದು ಗ್ರಾಮದ ವೃದ್ಧರೋರ್ವ ಶಾಸಕರ ಬಳಿ ಅಳಲು ಹೇಳಿಕೊಂಡರು. ಅಲ್ಲದೆ ಗ್ರಾಮದಲ್ಲಿ ಪಶುಸಂಗೋಪನೆ ಹಾಗೂ ಹೈನುಗಾರಿಕೆ ನಂಬಿಕೊಂಡು ಬಹಳಷ್ಟು ಜನರು ಜೀವನ ಸಾಗಿಸುತ್ತಿದ್ದಾರೆ. ಗ್ರಾಮದಲ್ಲಿ ಪಶು ಚಿಕಿತ್ಸಾ ಕೇಂದ್ರ ನಿರ್ಮಿಸುವಂತೆ ಗ್ರಾಮಸ್ಥರು ಮನವಿ ಮಾಡಿದರು. ಯರೇಹಳ್ಳಿ ಪಶು ಆಸ್ಪತ್ರೆ, ಗ್ರಾಮದಿಂದ 29 ಕಿ.ಮೀ. ದೂರ ಇದೆ. ಕುರುಮರಡಿಕೆರೆ ಗ್ರಾಮದಲ್ಲಿ ಪಶುವೈದ್ಯರು ಹಾಗೂ ಪಶು ನಿರೀಕ್ಷಕರ ಹುದ್ದೆಗಳು ಖಾಲಿ ಇವೆ. ಆದ್ದರಿಂದ ಬೇರೆ ಪಶುವೈದ್ಯರನ್ನು ಹಾಗೂ ಪಶುನಿರೀಕ್ಷಕರನ್ನು ನಿಯೋಜಿಸಲಾಗಿದೆ ಎಂದು ಪಶುಇಲಾಖೆ ಉಪನಿರ್ದೇಶಕ ಡಾ. ಬಾಬು ರತ್ನ ಮಾಹಿತಿ ನೀಡಿದರು. ತಕ್ಷಣವೇ ಗ್ರಾಮದಲ್ಲಿ ಪಶು ಚಿಕಿತ್ಸಾ ಕೇಂದ್ರ ನಿರ್ಮಿಸಲು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಕಾರ್ಯಕ್ರಮದಲ್ಲಿ ಗ್ರಾಮದ ಸ್ವಚ್ಛತೆ, ಚರಂಡಿ, ರಸ್ತೆ, ನಿವೇಶನ ಮಂಜೂರಾತಿ ಸೇರಿದಂತೆ ಹತ್ತು ಹಲವು ಸಮಸ್ಯೆಗಳ ಕುರಿತು ಜನರೊಂದಿಗೆ ಚರ್ಚಿಸಿ ಪರಿಹಾರ ಮಾರ್ಗಗಳನ್ನು ಶಾಸಕರು ತೋರಿದರು.

ಕಾರ್ಯಕ್ರಮದಲ್ಲಿ ಇಂಗಳದಾಳ್ ಗ್ರಾಮ ಪಂಚಾಯಿತಿ ಅಧ್ಯಕ್ಷ ಶಿರುವಲ್ಲಪ್ಪ, ಉಪಾಧ್ಯಕ್ಷೆ ನೇತ್ರಮ್ಮ, ಮಾಜಿ ಉಪಾಧ್ಯಕ್ಷೆ ಬೃಂದಾ, ಉಪವಿಭಾಗಾಧಿಕಾರಿ ಎಂ.ಕಾರ್ತೀಕ್, ತಾಲ್ಲೂಕು ಪಂಚಾಯಿತಿ ಇಓ ರವಿಕುಮಾರ್ ಸೇರಿದಂತೆ ಗ್ರಾಮ ಪಂಚಾಯಿತಿ ಸದಸ್ಯರು ಹಾಗೂ ಗ್ರಾಮಸ್ಥರು ಇದ್ದರು. ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಸದಾಶಿವ ಆಯೋಗದ ವರದಿ ಜಾರಿಗೆ ಆಗ್ರಹ

» ಚಿತ್ರದುರ್ಗ

ಬೆಳಗಾವಿಯಲ್ಲಿ ನಡೆಯಲಿರುವ ಅಧಿವೇಶನದಲ್ಲಿ ನಿವೃತ್ತ ನ್ಯಾಯಮೂರ್ತಿ ಸದಾಶಿವ ಆಯೋಗದ ವರದಿ ಹಾಗೂ ಕಾಂತರಾಜ್ ಆಯೋಗದ ವರದಿಯನ್ನು ಶೀಘ್ರ ಜಾರಿಗೊಳಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಡಾ.ದಾದಾಸಾಹೇಬ್ ಎನ್.ಮೂರ್ತಿ ಸ್ಥಾಪಿತ) ವತಿಯಿಂದ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು.

ಪರಿಶಿಷ್ಟ ಜಾತಿಗೆ ಉದ್ಯೋಗ, ಶಿಕ್ಷಣದಲ್ಲಿ ಕಲ್ಪಿಸಿರುವ ಶೇಕಡ 15% ರಷ್ಟು ಮೀಸಲಾತಿ ಪರಿಶಿಷ್ಟ ಪಟ್ಟಿಯಲ್ಲಿರುವ 101 ಜಾತಿಗಳಿಗೆ ಸಮನಾಗಿ ಹಂಚಿಕೆಯಾಗಿಲ್ಲ. ಈ ತಾರತಮ್ಯ ನಿವಾರಣೆಗಾಗಿ ಕಳೆದ 30 ವರ್ಷಗಳಿಂದ ಸಂಘಟನೆಯ ಹೋರಾಟದ ಫಲವಾಗಿ 2005 ರಲ್ಲಿ ಎ.ಜೆ.ಸದಾಶಿವ ಆಯೋಗ ರಚನೆಯಾಗಿತ್ತು. ಆದರೆ ಆ ವರದಿಯನ್ನು ಜಾರಿಗೊಳಿಸದೆ ಸರ್ಕಾರಗಳು ನಿರಾಸಕ್ತಿ ತೋರುತ್ತಿವೆ. ಅದೇ ರೀತಿ ಕಾಂತರಾಜ್ ಆಯೋಗದ ವರದಿಯನ್ನು ಸದನದಲ್ಲಿ ಮಂಡಿಸಿ, ಚರ್ಚೆಗೆ ಅವಕಾಶವನ್ನು ನೀಡಬೇಕು, ಜನತೆಯಲ್ಲಿ ಮೂಡಿರುವ ಗೊಂದಲವನ್ನು ನಿವಾರಣೆ ಮಾಡಬೇಕಿದೆ.




ವರದಿಯನ್ನು ಜಾರಿ ಮಾಡುವುದರ ಮೂಲಕ ಎಲ್ಲಾ ಜಾತಿಯ ಜನರ ಜನಸಂಖ್ಯಾ ಆಧರಿಸಿ ಮೀಸಲಾತಿ ಹಂಚಿಕೆ ಮಾಡುವಲ್ಲಿ ಸರ್ಕಾರ ಬದ್ಧತೆ ಪ್ರದರ್ಶಿಸಬೇಕು ಎಂದು ಆಗ್ರಹಿಸಿದ್ದಾರೆ.

ನಿ.ನ್ಯಾ.ಎ.ಜೆ.ಸದಾಶಿವ ಆಯೋಗದ ವರದಿಯನ್ನು ಉಭಯ ಸದನಗಳಲ್ಲಿ ಮಂಡಿಸಿ, ಅಂಗೀಕರಿಸಿ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡುವುದು. ಕೇಂದ್ರ ಸರ್ಕಾರ ಚಳಿಗಾಲದ ಅಧಿವೇಶನದಲ್ಲಿ ಪರಿಶಿಷ್ಟ ಒಳ ಮೀಸಲಾತಿ ವರ್ಗೀಕರಣಕ್ಕೆ ಮುಂದಾಗಬೇಕು. 2008 ರಲ್ಲಿ ಉಷಾ ಮೆಹ್ರ ಸಮಿತಿ ನೀಡಿರುವ ವರದಿಯಂತೆ ಸಂವಿಧಾನದ ಅನುಚ್ಛೇದ 341ಕ್ಕೆ ತಿದ್ದುಪಡಿ. 341/3ನ್ನು ಸೇರಿಸಿ ಒಳಮೀಸಲಾತಿ ಅನುಷ್ಠಾನ ಮಾಡಿ ಸಂವಿಧಾನ ಷೆಡ್ಯೂಲ್–9 ರಲ್ಲಿ ಸೇರಿಸಬೇಕೆಂದು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದೆ. ಸುಪ್ರಿಂ ಕೋರ್ಟ್ 7 ನ್ಯಾಯಾಧೀಶರ ಪೀಠದಲ್ಲಿರುವ ವಿವಿಧ ರಾಜ್ಯಗಳ ಒಳಮೀಸಲಾತಿ ಪ್ರಕರಣಗಳ ಪರವಾಗಿ ಕೇಂದ್ರ ಸರ್ಕಾರ ಬಲವಾಗಿ ವಾದ ಮಂಡಿಸಿ ಒಳ ಮೀಸಲಾತಿ ವರ್ಗೀಕರಿಸಬೇಕು. ಕಾಂತರಾಜ್ ಆಯೋಗದ ವರದಿಯನ್ನು ಸದನದಲ್ಲಿ ಚರ್ಚಿಸಿ ಅಂಗೀಕರಿಸಿ ಜನಸಂಖ್ಯೆ ಗನುಗುಣವಾಗಿ ಮೀಸಲಾತಿ ಹಂಚಿಕೆಯಾಗಲಿ. ನಿ.ನ್ಯಾ. ನಾಗಮೋಹನದಾಸ್ ಆಯೋಗದ ವರದಿಯನ್ನು ಯಥಾವತ್ತಾಗಿ ಅನುಷ್ಠಾನ ಮಾಡಿ ಸಂವಿಧಾನದ ಷೆಡ್ಯೂಲ್–9 ರಲ್ಲಿ ಸೇರಿಸಬೇಕು. ಮೀಸಲಾತಿ ಪ್ರಮಾಣವನ್ನು ಶೇಕಡ 75% ಕ್ಕೆ ಹೆಚ್ಚಿಸಬೇಕು. ರಾಜ್ಯ ಹಾಗೂ ಜಿಲ್ಲೆಯಾದ್ಯಂತ ಎಲ್ಲಾ ವರ್ಗದ ವಿದ್ಯಾರ್ಥಿ ನಿಲಯಗಳನ್ನು ಹೆಚ್ಚಿಸಬೇಕು. ಹಾಗೂ ವಿದ್ಯಾರ್ಥಿಗಳ ವಿದ್ಯಾರ್ಥಿ ವೇತನಗಳನ್ನು ಹೆಚ್ಚಿಸಬೇಕು ಎಂದು ಆಹ್ರಹಿಸಬೇಕು ಎಂದು ಆಗ್ರಹಿಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ಜಿಲ್ಲಾಧ್ಯಕ್ಷ ಸಿ.ಹೆಚ್. ಮಂಜುನಾಥ, ಸಂಘಟನೆಯ ವಿಭಾಗೀಯ ಕಾರ್ಯದರ್ಶಿ ನೇಹ ಮಲ್ಲೇಶ್ ತಾಲ್ಲೂಕು ಅಧ್ಯಕ್ಷ ಡಿ.ವೀರಭದ್ರಪ್ಪ, ಅಲ್ಪಸಂಖ್ಯಾತರ ವಿಭಾಗದ ಅಧ್ಯಕ್ಷ ದಾದಾಪೀರ್, ಡಿ.ಶಿವಣ್ಣ, ಜಾಕೀರ್ ಹುಸೇನ್ ಸೇರಿದಂತೆ ಇತರರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಭಾಷಾ ಕೌಶಲ್ಯ ಬೆಳೆಸಿಕೊಳ್ಳಿ: ಕ್ಷೇತ್ರ ಶಿಕ್ಷಣಾಧಿಕಾರಿ ನಾಗಭೂಷಣ್



» ಚಿತ್ರದುರ್ಗ

ಪ್ರಸ್ತುತ ಸ್ಪರ್ಧಾ ಯುಗದಲ್ಲಿ ಮಕ್ಕಳು ಕನ್ನಡ ಭಾಷೆಯ ಕೌಶಲ್ಯ ಶಾಲಾ ಹಂತದಲ್ಲಿ ಬೆಳಸಿಕೊಳ್ಳುವುದು ಅತಿ ಮುಖ್ಯವಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್ ಹೇಳಿದರು. ಚಿತ್ರದುರ್ಗ ನಗರದ ಕ್ಷೇತ್ರ ಸಂಪನ್ಮೂಲ ಕೇಂದ್ರದಲ್ಲಿ ಮಂಗಳವಾರ ಆಲೂರು ವೆಂಕಟರಾವ್ ಭಾಷಾ ತರಬೇತಿಸ ಕೌಶಲ ಕೇಂದ್ರ, ಸಿ.ಟಿ.ಇ ಹಾಗೂ ಡಯಟ್ ವತಿಯಿಂದ ಚಿತ್ರದುರ್ಗ ತಾಲ್ಲೂಕಿನ ಸರ್ಕಾರಿ ಪ್ರಾಥಮಿಕ 6, 7 ಮತ್ತು 8ನೇ ತರಗತಿಗೆ ಕಥೆ ಹೇಳುವ ಸ್ಪರ್ಧೆ ಮತ್ತು ಸರ್ಕಾರಿ ಪ್ರೌಢಶಾಲೆಯ 9 ಮತ್ತು 10ನೇ ತರಗತಿಗೆ ರಸಪ್ರಶ್ನೆ ಸ್ಪರ್ಧೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಕ್ಷೇತ್ರ ಸಮನ್ವಯಾಧಿಕಾರಿ ಈ.ಸಂಪತ್ ಕುಮಾರ್ ಮಾತನಾಡಿ, ಕನ್ನಡ ಭಾಷೆಯ ಕುರಿತು ಮಕ್ಕಳು ಹೆಚ್ಚಿನ ಅಸಕ್ತಿಯಿಂದ ಭಾಷಾ ಪ್ರೌಢಿಮೆ ಬೆಳಸಿಕೊಳ್ಳಬೇಕು ಎಂದು ತಿಳಿಸಿದರು. ನೋಡ್‌ಲ್ ಅಧಿಕಾರಿ ಬಿಆರ್‌ಪಿ ದೇವರಾಜ್, ಬಿಆರ್‌ಪಿಗಳಾದ ಕೆ.ಖಲಂದರ್, ಬಿ.ಸಿ.ವಿದ್ಯಾ, ಎಸ್.ಮೈಲಾರಪ್ಪ, ಶಾಹಿನ ಖಾನಂ ಹಾಗೂ ತೀರ್ಪುಗಾರರಾದ ಎಂ.ತಿಪ್ಪೇಸ್ವಾಮಿ, ವಸಂತ್ ಕುಮಾರ್, ತಿಮ್ಮರಾಜು, ಎಸ್.ಜಿ..ಸೌಭಾಗ್ಯ ಇದ್ದರು.

### ಬಾಲ ಕಾರ್ಮಿಕ ನಿಷೇದ ಕುರಿತು ಜಾಗೃತಿ



» ಚಿತ್ರದುರ್ಗ

ರಾಷ್ಟ್ರವ್ಯಾಪಿ ಬಾಲಕಾರ್ಮಿಕ ರಕ್ಷಣೆ ಹಾಗೂ ಪುರ್ನಸತಿ ಅಭಿಯಾನದ ಅಂಗವಾಗಿ ಬುಧವಾರ ಹಿರಿಯೂರು ನಗರ ವ್ಯಾಪ್ತಿಯಲ್ಲಿ ಬಾಲ ಕಾರ್ಮಿಕ ನಿಷೇದ ಕುರಿತು ಜಾಗೃತಿ ಕಾರ್ಯಕ್ರಮ ನಡೆಸಲಾಯಿತು. ಹೋಟೆಲ್, ಗ್ಯಾರೇಜ್, ಬೇಕರಿ ಅಂಗಡಿಗಳ ಮೇಲೆ ಬಾಲ್ಯಾವಸ್ಥೆ ಹಾಗೂ ಕಿಶೋರವಸ್ಥೆ ಕಾರ್ಮಿಕ ನಿಷೇಧ 1986 ರ ಕಾಯಿದೆ ಅಡಿ ಅನಿರೀಕ್ಷಿತ ಭೇಟಿ ನೀಡಿ ಸ್ಟಿಕರ್ಸ್ ಹಾಗೂ ಕರಪತ್ರಗಳನ್ನು ಸಂಸ್ಥೆಯ ಮಾಲೀಕರಿಗೆ ನೀಡುವ ಮೂಲಕ ಜನರಲ್ಲಿ ಜಾಗೃತಿ ಮೂಡಿಸುಲಾಯಿತು. ಈ ಸಂದರ್ಭದಲ್ಲಿ ಹಿರಿಯೂರು ಕಾರ್ಮಿಕ ನಿರೀಕ್ಷಕ ಅಲ್ಲಾಬಕ್ಷ್, ರು, ಜಿಲ್ಲಾ ಬಾಲ ಕಾರ್ಮಿಕ ಯೋಜನೆ ಯೋಜನ ನಿರ್ದೇಶಕ ಪಿ ಸತೀಶ್ ಕುಮಾರ್, ಪೊಲೀಸ್ ಸಿಬ್ಬಂದಿ ತಿಮ್ಮಾರೆಡ್ಡಿ ಹಾಜರಿದ್ದರು.

### ಕೇಂದ್ರ ಯೋಜನೆಗಳ ಕಿರುಚಿತ್ರ ಪ್ರದರ್ಶನ




» ಚಿತ್ರದುರ್ಗ

ಚಿತ್ರದುರ್ಗ ತಾಲೂಕಿನ ದ್ಯಾಮವ್ವನಹಳ್ಳಿ ಗ್ರಾಮಪಂಚಾಯತಿ ವ್ಯಾಪ್ತಿಯಲ್ಲಿ ವಿಕಾಸ ಯಾತ್ರೆಯ ಕಾರ್ಯಕ್ರದ ಅಂಗವಾಗಿ ಬುಧವಾರ ಕೇಂದ್ರ ಸರಕಾರದಿಂದ ನೇರ ಫಲಾನುಭವಿಗಳಿಗೆ ತಲುಪುವ ಯೋಜನೆಗಳ ಕಿರು ಚಿತ್ರವನ್ನು ಪ್ರದರ್ಶನ ಏರ್ಪಡಿಸಲಾಗಿತ್ತು. ದ್ಯಾಮವ್ವನಹಳ್ಳಿ ಗ್ರಾಮಪಂಚಾಯತಿ ಅಧ್ಯಕ್ಷೆ ರಾಗಿಣಿ ವಿಕಾಸ ಸಂಕಲ್ಪ ಯಾತ್ರೆಯನ್ನು ಉದ್ಘಾಟಿಸಿದರು. ವಿಶೇಷ ವಾಹನದ ಎಲ್.ಇ.ಡಿ ಪರದೆಯ ಮೂಲಕ ಕಿರುಚಿತ್ರವನ್ನು ಜನವಸತಿ ಪ್ರದೇಶಗಳಲ್ಲಿ ಪ್ರದರ್ಶಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ನಿರ್ದೇಶ ತಿಪ್ಪೇಶ್ ಆಯುಷ್ಮಾನ್ ಭಾರತ ಕಾರ್ಡ ಪಡೆದುಕೊಳ್ಳುವುದರಿಂದ ಜನರಿಗೆ ಆರೋಗ್ಯ ಸಮಸ್ಯೆ ಬಂದಾಗ ನೆರವಾಗಲಿದೆ. ಐದು ಲಕ್ಷದ ವರೆಗೆ ಬರುವ ಆಸ್ಪತ್ರೆಯ ಖರ್ಚನ್ನು ಕೇಂದ್ರ ಸರಕಾರ ನೀಡಲಿದೆ. ಈ ಯೋಜನೆಯ ಸದುಪಯೋಗ ಎಲ್ಲರೂ ಪಡೆದುಕೊಳ್ಳಬೇಕು ಎಂದರು. ಸಣ್ಣ ರೈತರಿಗೆ ಕಿಸಾನ್ ಕ್ರೆಡಿಟ್ ಕಾರ್ಡ ಸೌಲಭ್ಯ,ಅಟಲ್ ಪಿಂಚಣಿ ಸೌಲಭ್ಯ ಮತ್ತು ಸುರಕ್ಷಾ ವಿಮಾ ಸೌಲಭ್ಯ, ಕೇಂದ್ರ ಸರಕಾರ ನೂತನವಾಗಿ ಜಾರಿಗೆ ತಂದಿರುವ ವಿಶ್ವಕರ್ಮ ಯೋಜನೆಯಲ್ಲಿ ಕುಷಲ ಕರ್ಮಗಳಿಗಳಿಗೆ ನೇರ ಸಾಲ ಯೋಜನೆಯಾಗಿದ್ದು ನೊಂದಣಿ ಮಾಡಿಸಿಕೊಳ್ಳುವಂತೆ ಗ್ರಾಮಸ್ಥರಲ್ಲಿ ಮನವಿ ಮಾಡಿದರು. ಕಾರ್ಯಕ್ರಮದಲ್ಲಿ ದ್ಯಾಮವ್ವನಹಳ್ಳಿ ಗ್ರಾಮಪಂಚಾಯತಿ ಸದಸ್ಯರು ಕೇಂದ್ರ ಸರಕಾರದ ಯೊಜನೆಯ ಫಲಾನುಭವಿಗಳು ಭಾಗವಹಿಸಿದ್ದರು.

# ಪೌಷ್ಠಿಕಾಂಶವುಳ್ಳ ಆಹಾರ ಸೇವನೆ ಮೂಲಕ ಸದೃಢ ಆರೋಗ್ಯಕ್ಕೆ ಮುಂದಾಗಿ: ಎಚ್.ಶಶಿಧರ

» ಚಳ್ಳಕೆರೆ

ಉತ್ತಮ ಸದೃಢ ಆರೋಗ್ಯವನ್ನು ಸಂರಕ್ಷಿಸುವ ನಿಟ್ಟಿನಲ್ಲಿ ಮಕ್ಕಳು ವೈಯಕ್ತಿಕ ಸ್ವಚ್ಚತೆ ಮತ್ತು ಗುಣಮಟ್ಟದ ಪೌಷ್ಠೀಕ ಆಹಾರ ಸೇವನೆಗೆ ಹೆಚ್ಚು ಗಮನ ನೀಡಬೇಕು. ನಮ್ಮ ಆರೋಗ್ಯ ಸುಧಾರಣೆಯಲ್ಲಿ ಎಲ್ಲಾ ಹಂತದಲ್ಲೂ ನಾವು ಸೇವಿಸುವಪೌಷ್ಠೀಕಆಹಾರನಮಗೆನೆರವಾಗುತ್ತದೆ. ಪೌಷ್ಠೀಕಾಂಶದ ಆಹಾರವನ್ನು ಸೇವಿಸದೇ ಇದ್ದರೆ ಅನಾರೋಗ್ಯದಿಂದ ಜೀವಕ್ಕೆ ಅಪಾಯವಾಗುವ ಸಂಭವವಿದೆ ಎಂದು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಚ್.ಶಶಿಧರ ತಿಳಿಸಿದರು.

ನಗರದ ಬಾಪೂಜಿ ಪದವಿ ಪೂರ್ವ ಕಾಲೇಜಿನಲ್ಲಿ ತಾಲ್ಲೂಕು ಆರೋಗ್ಯ ಇಲಾಖೆ ಹಾಗೂ ಬಾಪೂಜಿ ಕಾಲೇಜಿನ ಸಹಯೋಗದೊಂದಿಗೆ ಮಕ್ಕಳಲ್ಲಿ ಪೌಷ್ಠೀಕ ಆಹಾರ ಸೇವನೆ ಕುರಿತು ಹಮ್ಮಿಕೊಂಡಿದ್ದ ಅನಿಮಿಯ ಮುಕ್ತಪೌಷ್ಠೀಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಎನ್. ಕಾಶಿ ಮಾತನಾಡಿ, ಸಾಮಾನ್ಯವಾಗಿ ಮಕ್ಕಳಲ್ಲಿ ಮಾನಸಿಕ ಮತ್ತು ದೈಹಿಕ ಸ್ಥಿತಿಯಲ್ಲಿ ನಿರೀಕ್ಷೆಗೂ ಮೀರಿ ಹೆಚ್ಚು ಬದಲಾವಣೆಯನ್ನು ನಾವು ಗುರುತಿಸಬಹುದು. ಕೆಲವೊಮ್ಮೆ ಇಂತಹ ಬದಲಾವಣೆಗಳು ಅಪಾಯಗಳ ಮುನ್ಸೂಚನೆಯಾಗಲಿವೆ. ಈ ಹಿನ್ನೆಲೆಯಲ್ಲಿ ಆರೋಗ್ಯ ಇಲಾಖೆ ಶಾಲಾ ಮಕ್ಕಳ ಹಂತದಲ್ಲೇ ಪೌಷ್ಠೀಕಾಂಶ ಕಾರ್ಯಕ್ರಮದ ಮೂಲಕ ಮಕ್ಕಳ ಆರೋಗ್ಯ ಸುಧಾರಣೆಗೆ ಪ್ರಾಮಾಣಿಕ ಪ್ರಯತ್ನ



ನಡೆಸಿದೆ. ಗರ್ಭಿಣಿಯರು, ಬಾಣಂತಿಯರು ವಿಶೇಷವಾಗಿ ಗಮನ ಕೊಡಬೇಕು ಎಂದರು.

ಸಿಡಿಪಿಒ ಹರಿಪ್ರಸಾದ್ ಮಾತನಾಡಿ, ಅಂಗನವಾಡಿ ಮತ್ತು ಮನೆಯ ಸುತ್ತಮುತ್ತಲ ಪ್ರದೇಶದಲ್ಲಿಪರಿಸರವನ್ನುಸ್ವಚ್ಚವಾಗಿಡುವನಿಟ್ಟಿನಲ್ಲಿ ಹೂ, ಕೈತೋಟಗಳನ್ನು ನಿರ್ಮಿಸಿಕೊಳ್ಳಬೇಕು. ಇತ್ತೀಚಿನ ಸಂಶೋಧನೆಗಳ ಪ್ರಕಾರ ಮಹಿಳೆಯರಲ್ಲಿ ಅನಿಮಿಯದ ಕೊರತೆ ಎದ್ದು ಕಾಣುತ್ತಿದ್ದು, ಇದರಿಂದ ಅವರಿಗೆ ನಿಶಕ್ತಿ ಹಾಗೂ ನಿರುತ್ಸಾಹ ಸಾಮಾನ್ಯವಾಗಿದೆ. ಅಂಗನವಾಡಿ, ಆಶಾ ಕಾರ್ಯಕರ್ತೆಯರು ತಮ್ಮ ವ್ಯಾಪ್ತಿಯಲ್ಲಿ ಪೌಷ್ಠೀಕಾಂಶ ಆಹಾರ ಸೇವನೆ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯವನ್ನು ನಿರಂತರ ಹಮ್ಮಿಕೊಳ್ಳಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಉಪನ್ಯಾಸಕ ಜಗದೀಶ್ ಮಾತನಾಡಿ, ಇಂತಹ ಕಾರ್ಯಕ್ರಮಗಳಿಂದ ವಿದ್ಯಾರ್ಥಿಗಳು ಯಾವತರಹದ ಆಹಾರವನ್ನು ಯಾವ ಸಂದರ್ಭದಲ್ಲಿ ಸೇವಿಸಿ ಆರೋಗ್ಯ ಸುಧಾರಣೆ ಮಾಡಿಕೊಳ್ಳಬೇಕು ಎಂಬ ಬಗ್ಗೆ ಹಲವಾರು ಉಪಯುಕ್ತ ಮಾಹಿತಿ ನೀಡಲಾಗಿದೆ. ಇದರ ಸದುಪಯೋಗವನ್ನು ಹೆಚ್ಚಿನ ಪ್ರಮಾಣದಲ್ಲಿ ಪಡೆದುಕೊಳ್ಳುವತ್ತ ಎಲ್ಲರೂ ಗಮನಹರಿಸಬೇಕು ಎಂದರು. ಕಾರ್ಯಕ್ರಮದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಎಸ್.ಬಿ.ತಿಪ್ಪೇಸ್ವಾಮಿ,ಆರ್‌ಬಿಎಸ್‌ಕೆ ವೈದ್ಯರಾದ ಸಂದೀಪ್, ಮಂಜುನಾಥ, ಗೀತಾ, ತಿಪ್ಪೇಸ್ವಾಮಿ, ಆರೋಗ್ಯ ನಿರೀಕ್ಷಕ ಅಮೃತ್‌ರಾಜ್, ರಾಜುಸಂಜಯ್, ಅನಿತಾ, ಅರ್ಪಿತ, ಅಕ್ಷತಾ, ಆರೋಗ್ಯ ಸುರಕ್ಷಣಾಧಿಕಾರಿ ಸುವರ್ಣಮ್ಮ ಮುಂತಾದವರು ಪಾಲ್ಗೊಂಡಿದ್ದರು.



ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲ್ಲೂಕು ಶಾಖೆಯ ಸಮುದಾಯ ಭವನ ಉದ್ಘಾಟನೆ, ಉತ್ತಮ ಸೇವಾ ನೌಕರರಿಗೆ ಪ್ರಶಸ್ತಿ ಪ್ರದಾನ, ವ್ಯಕ್ತಿತ್ವ ವಿಕಸನ ಕಾರ್ಯಾಗಾರವನ್ನು ಶಾಸಕ ಡಾ.ಎಂ.ಚಂದ್ರಪ್ಪ ಉದ್ಘಾಟಿಸಿದರು.

# ಕರಿಸಿದ್ದೇಶ್ವರ ಪ್ರೌಢಶಾಲೆಯ ನೂತನ ಶಾಲಾ ಕಟ್ಟಡ ಕಾಮಗಾರಿಗೆ ಶಾಸಕ ಚಂದ್ರಪ್ಪನವರಿಂದ ಭೂಮಿಪೂಜೆ.



» ಹೊಳಲ್ಕೆರೆ

ಯಾವುದೇ ಒಂದು ಸಂಸ್ಥೆ ಕಟ್ಟುವುದು ಸುಲಭದ ಮಾತಲ್ಲ. ಅನೇಕರ ಪರಿಶ್ರಮ ಅಡಗಿದೆ. ಸಾವಿರಾರು ಶಿಕ್ಷಕರುಗಳು ಸೇರಿಕೊಂಡು ಸಮಾಜಕ್ಕೆ ಸಹಕಾರ ನೀಡುತ್ತಾ ಬಂದಿದ್ದಾರೆಂದು ಹೊಳಲ್ಕೆರೆ ಶಾಸಕ ಡಾ.ಎಂ. ಚಂದ್ರಪ್ಪ ಮೆಚ್ಚುಗೆ ವ್ಯಕ್ತಪಡಿಸಿದರು.

ತಾಲ್ಲೂಕಿನ ರಾಮಗಿರಿ ಗ್ರಾಮದಲ್ಲಿ ಶ್ರೀ ತರಳಬಾಳು ಜಗದ್ಗುರು ವಿದ್ಯಾಸಂಸ್ಥೆ ಸಿರಿಗೆರೆ ಕರಿಸಿದ್ದೇಶ್ವರ ಪ್ರೌಢಶಾಲೆಯ ನೂತನ ಶಾಲಾ ಕಟ್ಟಡ ಕಾಮಗಾರಿಗೆ ಬುಧವಾರ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ಹಳೆಯ ಕಟ್ಟಡ ಕೆಡವಿ ಹೊಸ ಕಟ್ಟಡ ಕಟ್ಟಲು ಸಲಹಾ ಸಮಿತಿ ತೀರ್ಮಾನಿಸಿರುವುದಕ್ಕೆ ಪೂಜ್ಯರ ಆಶೀರ್ವಾದ ದೊರಕಿದೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಏಳು ತಿಂಗಳಾಗಿದೆ. ಶಾಸಕರುಗಳು ಕ್ಷೇತ್ರದ ಅಭಿವೃದ್ದಿಗೆ ಹಣ ಕೇಳಿದರೆ ಐದು ಉಚಿತ ಗ್ಯಾರೆಂಟಿಗಳಿಗೆ ಹಣ ಕೊಟ್ಟಿದ್ದೇವೆ. ನಿಮಗೆ ಅನುದಾನ ನೀಡಲು ಹಣವಿಲ್ಲ ಎಂದು ಕಾಂಗ್ರೆಸ್ ಶಾಸಕರುಗಳಿಗೆ ಹೇಳಲಾಗುತ್ತಿದೆ. ಆದರೆ ನಾನು ವಿರೋಧ ಪಕ್ಷದಲ್ಲಿದ್ದೇನೆ. ಕ್ಷೇತ್ರದ ಅಭಿವೃದ್ದಿಗೆ ಸಾವಿರಾರು ಕೋಟಿ ರೂ.ಗಳ ಅನುದಾನ ತರುವ ಶಕ್ತಿಯಿದೆ. ಹಿಂದಿನ ಬಿಜೆಪಿ.ಸರ್ಕಾರದಲ್ಲಿ ಬಿ.ಎಸ್. ಯಡಿಯೂರಪ್ಪ, ಬಸವರಾಜ್ ಬೊಮ್ಮಾಯಿ ಇವರುಗಳು ನಾನು ಕೇಳಿದಷ್ಟು ಅನುದಾನ ನೀಡುತ್ತಿದ್ದರು ಎಂದು ಸ್ಮರಿಸಿದರು.

ಕಳೆದ ವರ್ಷವೇ ಈ ಕೆಲಸ ಮಾಡಿದ್ದರೆ ನಾನು ಅನುದಾನ ಕೊಡುತ್ತಿದೆ. ಆದರೆ ಈಗ ಕೊಡಲ್ಲ ಎಂದು ಹೇಳುವುದಿಲ್ಲ. ನನ್ನ ಅನುದಾನದಲ್ಲಿ ಎಷ್ಟು ಸಾಧ್ಯವೋ ಅಷ್ಟು ನೀಡುತ್ತೇನೆ. ಭರಮಸಾಗರದಿಂದ ಮೊದಲ ಬಾರಿ ಗೆದ್ದವರು ಎರಡನೆ ಬಾರಿ ಗೆಲ್ಲುವುದಿಲ್ಲ ಎಂದು ಹೇಳುತ್ತಿದ್ದರು. ಆದರೆ ಎರಡನೆ ಬಾರಿಯೂ ವಿಧಾನಸಭೆ ಚುನಾವಣೆಯಲ್ಲಿ ಗೆದ್ದು ದಾಖಲೆ ನಿರ್ಮಿಸಿದ್ದೇನೆ. ಅದೇ ರೀತಿ ಹೊಳಲ್ಕೆರೆ ಕ್ಷೇತ್ರದಲ್ಲಿಯೂ ಮೂರನೆ ಬಾರಿಗೆ ನನ್ನನ್ನು ಗೆಲ್ಲಿಸಿದ್ದೀರಿ. ನಿಮ್ಮಗಳ ಋಣ ತೀರಿಸುವ ಕೆಲಸ ಮಾಡುತ್ತೇನೆಂದು ಭರವಸೆ ನೀಡಿದರು.ಯಾರ ಬಳಿಯೂ ಹೇಳಿಸಿಕೊಂಡು ಕೆಲಸ ಮಾಡುವವನಲ್ಲ. ಕ್ಷೇತ್ರದ ಜನರಿಗೆ ಒಳ್ಳೆಯದು ಮಾಡಬೇಕೆಂಬ ಸ್ವಭಾವ ನನ್ನದು. ಅಧಿಕಾರ ಮುಖ್ಯವಲ್ಲ. ಇದ್ದಂತ ಸಂದರ್ಭದಲ್ಲಿ ಹತ್ತಾರು ಜನ ಮೆಚ್ಚುವ ರೀತಿಯಲ್ಲಿ ಕೆಲಸ ಮಾಡಬೇಕು. 510 ಕೋಟಿ ರೂ.ಗಳನ್ನು ಖರ್ಚು ಮಾಡಿ ಹಿರಿಯೂರಿನ ವಾಣಿವಿಲಾಸಸಾಗರದಿಂದ ನೀರು ತಂದು ಪ್ರತಿ ಹಳ್ಳಿಯಲ್ಲಿ ಮನೆ ಮನೆಗೆ ಶುದ್ದ ಕುಡಿಯುವ ನೀರು ಪೂರೈಸಲಾಗುತ್ತಿದೆ.

## ಪ್ರಮುಖ ಸುದ್ದಿ

# ನಿವೃತ್ತಿ ನಂತರ ನಿಜವಾದ ಬದುಕು ಅಡಗಿದೆ: ಸೈಯದ್

» ಹೊಸದುರ್ಗ

ಬೀಳ್ಕೊಡುಗೆ ಎಂಬುದು ವೃತ್ತಿ ಜೀವನದಲ್ಲಿ ಸಾಮಾನ್ಯ ಸಂಗತಿ, ನಿವೃತ್ತಿಯ ನಂತರ ನಿಜವಾದ ಬದುಕು ಅಡಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಸೈಯದ್ ಮೋಸಿನ್ ಅಭಿಪ್ರಾಯಪಟ್ಟರು,

ತಾಲೂಕಿನ ಬಜ್ಜಪ್ಪನಹಟ್ಟಿ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠ ಶಾಲೆಯ ಶಿಕ್ಷಕಿ ಪಾಮಿದ ಕೆ, ರವರ ವಯೋನಿವೃದ್ಧಿ ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ನಮ್ಮ ಶಾಲೆಯಲ್ಲಿ ಸುಧೀರ್ಘ ಸೇವೆ ಸಲ್ಲಿಸಿ ವಯೋನಿವೃದ್ಧಿಯಾಗುತ್ತಿರುವ ಪಾಮಿದ ಮೇಡಂ ರವರಿಗೆ ಶಾಲೆಯ ಶಿಕ್ಷಕರು ಮತ್ತು ಮಕ್ಕಳು ವಿವಿಧ ಕಾರ್ಯಕ್ರಮಗಳನ್ನು ಆರೋಪಿಸುವುದರ ಮೂಲಕ ವೃತ್ತಿ ಜೀವನದ ನಂತರ ನಿವೃತ್ತಿಯ ಬದುಕು ಸುಖಮಯವಾಗಿರಲಿ ಎಂದು ಹರಸಿದ್ದೀರಿ ಬಜ್ಜಪ್ಪನಟ್ಟಿ ಶಾಲೆಯಲ್ಲಿ ಅತಿ ಹೆಚ್ಚು ವಿದ್ಯಾರ್ಥಿಗಳು ಶಿಕ್ಷಣ ಕಲಿಯುತ್ತಿದ್ದಾರೆ ಎಂದರೆ ಶಾಲೆಯ ಮೂಲಭೂತ ಸೌಕರ್ಯಗಳು ಮತ್ತು ನರಿತಾ ಶಿಕ್ಷಕರ ತಂಡ ಇಲ್ಲಿ ಕಾರ್ಯನಿರ್ವಹಿಸುತ್ತಿರುವುದು ಕಾರಣವಾಗಿದೆ ಎಂದರು.



ಪುರಸಭಾ ಸದಸ್ಯೆ ಡಾಕ್ಟರ್ ಸ್ವಾತಿ ಪ್ರದೀಪ್ ಮಾತನಾಡಿ ಒಬ್ಬ ನುರಿತ ಹಿಂದಿ ಶಿಕ್ಷಕಿಯಾಗಿ ಪಾಮಿದ ಮೇಡಂ ರವರ ಸೇವೆ ಅನನ್ಯವಾಗಿದೆ, ಯಾವುದೇ ಒಂದು ಶಾಲೆಯ ಅಭಿವೃದ್ಧಿ ಕೇವಲ ಭೌತಿಕವಾಗಿದ್ದರೆ ಸಾಲದು, ಮಕ್ಕಳ ಸಾಮರ್ಥ್ಯವನ್ನು ಗುರುತಿಸಿ ಅದಕ್ಕೆ ಪೂರಕವಾದ ಶಿಕ್ಷಣವನ್ನ ಮಕ್ಕಳಿಗೆ ಕಲಿಸಬೇಕುನಮ್ಮ ಸದ್ಗುರು ಆಯುರ್ವೇದ ಸಂಸ್ಥೆಯ ವತಿಯಿಂದ ದತ್ತು ಪಡೆದ ಬಜ್ಜಪ್ಪನಹಟ್ಟಿ ಮತ್ತು ಜೋಡಿ ತುಂಬಿನಕೆರೆ ಶಾಲೆಗಳನ್ನ ಶಾಲೆಯನ್ನ ಅಲ್ಪಾವಧಿಯಲ್ಲಿ ಒಂದು ಖಾಸಗಿ ಶಾಲೆಯಲ್ಲಿ ಇರುವ ಎಲ್ಲಾ ಮೂಲಭೂತ ಸೌಲಭ್ಯವನ್ನು ಈ ಸರ್ಕಾರಿ ಶಾಲೆಗಳಿಗೆ ಕಲ್ಪಿಸಿರುವುದು ನಮಗೆ ತೃಪ್ತಿ ತರಿಸಿದೆ,

ಸರ್ಕಾರಿ ಶಾಲೆಗಳ ಅಭಿವೃದ್ಧಿಯಾದರೆ ಮಾತ್ರ ಸ್ವಾಸ್ಥ ಸಮಾಜ ನಿರ್ಮಾಣವಾಗಿ ದೇಶ ಅಭಿವೃದ್ಧಿ ಕಾಣಲು ಸಾಧ್ಯವಾಗುತ್ತದೆ ಎಂದರು. ವಯೋ ನಿವೃತ್ತಿಯಾದ ಶಿಕ್ಷಕಿ ಪಾಮಿದ ಕೆ ಮಾತನಾಡಿ ನನ್ನನ್ನು ಶಿಕ್ಷಕಿ ಎಂಬ ಈ ಪವಿತ್ರ ಆವೃತ್ತಿಗೆ ಬರಲು ಕಾರಣರಾದ ನನ್ನ ಮತ ಪಿತೃಗಳಿಗೆ ನನ್ನ ನಮನಗಳು, ನನ್ನನ್ನ ಬಾಲ್ಯದಲ್ಲಿ ತಿದ್ದಿ ತಿಡಿ ಮೌಲ್ಯಯುತ ಶಿಕ್ಷಕಿಯಾಗಿ ಗುಣಾತ್ಮಕ ಶಿಕ್ಷಣ ನೀಡಿ ಮಕ್ಕಳನ್ನು ಬೆಳೆಸಲು ಕಾರಣರಾದ ನನ್ನ ಗುರು ವೃಂದಕ್ಕೆ ಅಭಿನಂದನೆಗಳು.

ಕಳೆದ 17 ವರ್ಷಗಳಿಂದ ಬಜ್ಜಪ್ಪನ ಹಟ್ಟಿ ಶಾಲೆಯಲ್ಲಿ ಸುಧೀರ್ಘಕಾಲ ಶಿಕ್ಷಕಿಯಾಗಿ ಸೇವೆಮಾಡಿದತೃಪ್ತಿನನಗಿದೆ.ನಮ್ಮ ಶಾಲೆಯ ನಾ ದತ್ತು ಪಡೆದ ಸದ್ಗುರು ಆಯುರ್ವೇದ ಸಂಸ್ಥೆಯ ಮಾಲೀಕರಾದ ಡಿಎಸ್ ಪ್ರದೀಪ ಅವರಿಗೆ ನನ್ನ ವೃತ್ತಿ ಜೀವನದಲ್ಲಿ ಶಿಕ್ಷಕಿಯಾಗಿ ಕೊನೆಯ ಅಭಿನಂದನೆಗಳನ್ನು ಸಲ್ಲಿಸುತ್ತಿದ್ದೇನೆ, ನಿಮ್ಮ ಸೇವೆ ಹೀಗೆಯೇ ನಿರಂತರವಾಗಿರಲೆಂಬುದೇ ನನ್ನ ಆಶಯ ಎಂದರು.

ಕಾರ್ಯಕ್ರಮದಲ್ಲಿ ಜಿ ಪಂ ಮಾಜಿ ಸದಸ್ಯ ಆರ್ ಹನುಮಂತಪ್ಪ, ಓರುಗಲ್ಲಪ್ಪ ಮಾತನಾಡಿದರು. ಕ್ಷೇತ್ರ ಶಿಕ್ಷಣ ಸಮನ್ವಯಾಧಿಕಾರಿ ಶ್ರೀನಿವಾಸ್, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಮಂಜುನಾಥ್, ಕ ಸಾ ಪ ಅಧ್ಯಕ್ಷ ಬಿಪಿ ಓಂಕಾರಪ್ಪ, ಚಂದ್ರಶೇಖರಪ್ಪ,ಬಜ್ಜಪ್ಪನಹಟ್ಟಿ ಶಾಲೆಯ ಮುಖ್ಯೋಪಾಧ್ಯಾಯ ರಂಗಪ್ಪ, ಎಸ್ ಡಿ ಎಂ ಸಿ ಅಧ್ಯಕ್ಷ ವೆಂಕಟೇಶ್,ಶಿಕ್ಷಕರಾದ ದೇವೇಂದ್ರಪ್ಪ ರಾಧಾಮಣಿ, ಮಂಗಳ, ಲೋಹಿತ್, ಮನು ಹಾಜರಿದ್ದರು

## ಫಾಸ್ಟ್ ನ್ಯೂಸ್

### ಎಚ್.ವೆಂಕಟೇಶ್‌ರಿಗೆ ರಾಜ್ಯೋತ್ಸವ ಸನ್ಮಾನ



» ದಾವಣಗೆರೆ

ಮಹಾನಗರಪಾಲಿಕೆ, ಕನ್ನಡ ಪರ ಸಂಘ-ಸಂಸ್ಥೆಗಳು, ಮತ್ತು ಪತ್ರಕರ್ತರ ಸಂಯುಕ್ತ ಆಶ್ರಯದಲ್ಲಿ 68 ನೇ ಕನ್ನಡ ರಾಜ್ಯೋತ್ಸವದ 2ನೇ ದಿನದ ಕಾರ್ಯಕ್ರಮದಲ್ಲಿ 'ಜಿಲ್ಲೆ ಸಮಾಚಾರ' ಸಂಪಾದಕ ಎಚ್.ವೆಂಕಟೇಶ್ ಅವರಿಗೆ ಪತ್ರಿಕೋದ್ಯಮದ ಕ್ಷೇತ್ರದ ಸಾಧನೆಗೆ ರಾಜ್ಯೋತ್ಸವ ಸನ್ಮಾನ ನೀಡಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎಸ್. ಎಸ್. ಮಲ್ಲಿಕಾರ್ಜುನ್ ,ಮೇಯರ್ ವಿನಾಯಕ್ ಬಿ.ಹೆಚ್.ಪೈಲ್ವಾನ್, ಉಪಮೇಯರ್ ಯಶೋಧ ಯಗ್ಗಪ್ಪ,ಆಯಕ್ತೆ ರೇಣುಕಾ, ಮಾಜಿ ಮೇಯರ್ ಎಸ್.ಟಿ.ವೀರೇಶ್,ಮಹಾನಗರ ಪಾಲಿಕೆಯ ಸದಸ್ಯರು , ಸಹ ಸಂಪಾದಕಿ ಶ್ರೀಮತಿ ಭಾರತಿ ಉಪಸ್ಥಿತರಿದ್ದರು.

### ಗುತ್ತಿಗೆ ಆಧಾರದಲ್ಲಿ ವಿವಿಧ ಹುದ್ದೆಗಳಿಗೆ ಅರ್ಜಿ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾನೂನು ಅಭಿರಕ್ಷಕ ಕಚೇರಿಯಲ್ಲಿ ಆಡಳಿತ ಸಹಾಯಕ/ಗುಮಾಸ್ತ, ಸ್ವಾಗತಕಾರರು-ವ-ಡಾಟಾ ಎಂಟ್ರಿ ಆಪರೇಟರ್ ಮತ್ತು ಜವಾನ ಹುದ್ದೆಗಳನ್ನು ಗುತ್ತಿಗೆ ಆಧಾರದಲ್ಲಿ ತಾತ್ಕಾಲಿಕ ಅವಧಿಗೆ (6 ತಿಂಗಳು) ಭರ್ತಿ ಮಾಡಲು ಅರ್ಜಿ ಆಹ್ವಾನಿಸಲಾಗಿದೆ. ಡಿಸೆಂಬರ್ 12 ಅರ್ಜಿ ಸಲ್ಲಿಸಲು ಕೊನೆಯ ದಿನ.

**ಆಡಳಿತ ಸಹಾಯಕ/ಗುಮಾಸ್ತ 1 ಹುದ್ದೆ:** ಆಡಳಿತ ಸಹಾಯಕ/ಗುಮಾಸ್ತ ಹುದ್ದೆಗೆ ಸರ್ಕಾರದಿಂದ ಮಾನ್ಯಗೊಂಡಂತಹ ಯಾವುದೇ ವಿಶ್ವವಿದ್ಯಾನಿಲಯದಿಂದ ಪದವಿ ವಿದ್ಯಾರ್ಹತೆ ಹಾಗೂ ಮೂಲ ಪದ ಸಂಸ್ಕರಣಾ ಕೌಶಲ್ಯಗಳು ಮತ್ತು ಕಾರ್ಯನಿರ್ವಹಿಸುವ ಸಾಮರ್ಥ್ಯ ಡೇಟಾ ಫೀಡ್ ಮಾಡಲು ಕಂಪ್ಯೂಟರ್ ಮತ್ತು ಕೌಶಲ್ಯಗಳು ಅರ್ಜಿಯ ಸರಿಯಾದ ಸೆಟ್ಟಿಂಗ್‌ನೊಂದಿಗೆ ಉತ್ತಮ ಬೆರಳಚ್ಚು ವೇಗ, ಉಕ್ತಲೇಖನ ತೆಗೆದುಕೊಳ್ಳುವ ಮತ್ತು ನ್ಯಾಯಾಲಯದಲ್ಲಿ ಪ್ರಸ್ತುತಿಗಾಗಿ ಕಡತಗಳನ್ನು ಸಿದ್ಧಪಡಿಸುವ ಸಾಮಾರ್ಥ್ಯ ಕಡತಗಳ ನಿರ್ವಹಣೆ ಮತ್ತು ಸಂಸ್ಕರಣೆಯ ಜ್ಞಾನ ಹೊಂದಿರುವ ಅಭ್ಯರ್ಥಿಗಳಿಗೆ ಹಾಗೂ ಪ್ರಾಧಿಕಾರದಲ್ಲಿಕಾರ್ಯನಿರ್ವಹಿಸಲುಆಸಕ್ತಿಇರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ಮಾಸಿಕ ರೂ.19000/- ವೇತನ ನೀಡಲಾಗುವುದು.

**ಸ್ವಾಗತಕಾರರು-ವ-ಡಾಟಾ ಎಂಟ್ರಿ ಆಪರೇಟರ್ 1 ಹುದ್ದೆ:** ವಿಶ್ವವಿದ್ಯಾನಿಲಯದಿಂದ ಪದವಿ ವಿದ್ಯಾರ್ಹತೆ ಹಾಗೂ ಅತ್ಯುತ್ತಮ ಮೌಖಿಕ ಮತ್ತು ಲಿಖಿತ ಸಂವಹನ ಕೌಶಲ್ಯಗಳು, ಪದ ಮತ್ತು ಡೇಟಾ ಸಂಸ್ಕರಣಾ ಸಾಮರ್ಥ್ಯಗಳು, ಟೆಲಿ ಸಂವಹನ ವ್ಯವಸ್ಥೆಗಳಲ್ಲಿ ಕೆಲಸ ಮಾಡುವ ಸಾಮರ್ಥ್ಯ, ಉತ್ತಮ ಟೈಪಿಂಗ್ ವೇಗದೊಂದಿಗೆ ಪ್ರಾವೀಣ್ಯತೆ ಹೊಂದಿರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ಮಾಸಿಕ ರೂ.17271 ವೇತನ ನೀಡಲಾಗುವುದು. ಜವಾನ ಹುದ್ದೆಗೆ ಎಸ್‌ಎಸ್‌ಎಲ್‌ಸಿ ಪಾಸಾಗಿರಬೇಕು. ಮಾಸಿಕ ರೂ.15202 ವೇತನ ನೀಡಲಾಗುವುದು. ಅರ್ಜಿ ಸಲ್ಲಿಕೆ ನವೆಂಬರ್ 29 ರಿಂದ ಪ್ರಾರಂಭವಾಗಲಿದೆ. ಡಿಸೆಂಬರ್ 12 ಸಂಜೆ 5ಕ್ಕೆ ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಆಸಕ್ತರು ತಮ್ಮ ವೈಯಕ್ತಿಕ ವಿವರಗಳೊಂದಿಗೆ ಸ್ವ ಹಸ್ತಾಕ್ಷರದಿಂದ ಸಂಪೂರ್ಣ ಮಾಹಿತಿಯನ್ನು ಭರ್ತಿ ಮಾಡಿ ಸೂಕ್ತ ದಾಖಲೆಗಳೊಂದಿಗೆ ಪಾಸ್ ಪೋರ್ಟ್ ಅಳತೆಯ 2 ಇತ್ತೀಚಿನ ಭಾವಚಿತ್ರಗಳೊಂದಿಗೆ ಅರ್ಜಿಯನ್ನು ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಚಿತ್ರದುರ್ಗ ಇವರಿಗೆ ಸಲ್ಲಿಸಬಹುದಾಗಿದೆ. ಅವಧಿ ಮುಗಿದ ನಂತರ ಬಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ತಿಳಿಸಿದ್ದಾರೆ.

### ಡಾ.ಕವಿತಾಗೆ ಒನಕೆ ಓಬವ್ವ ಪ್ರಶಸ್ತಿ, ವಿಜಯ್‌ಗೆ ಸೇವಾ ರತ್ನ ಪ್ರಶಸ್ತಿ

» ಚಿತ್ರದುರ್ಗ

ಜೋಗಿಮಟ್ಟಿ ಗೆಳೆಯರ ಬಳಗದಿಂದ 9ನೇ ವರ್ಷದ ಕನ್ನಡ ರಾಜ್ಯೋತ್ಸವದ ಅಂಗವಾಗಿ ನ.30 ರಂದು ಅದ್ದೂರಿಯಾಗಿ ಕನ್ನಡ ತಾಯಿ ಭುವನೇಶ್ವರಿಯ ಮಹಾಪೂಜೆ ಜೊತೆಗೆ ಜಿಲ್ಲೆಯ ಇಬ್ಬರು ಸಾಧಕರಿಗೆ ರಾಜ್ಯ ಪ್ರಶಸ್ತಿ ಪ್ರದಾನ ಮತ್ತು ಹಾರ್ಟ್, ಗ್ಯಾಸ್ಟ್ರೋಲಾಜಿ ಶಿಬಿರ, ಶಾಲಾ ಮಕ್ಕಳಿಗೆ ಪುಸ್ತಕ ವಿತರಣೆ ಹಮ್ಮಿಕೊಳ್ಳಲಾಗಿದೆ.

ಮುಂದಿನ ಜನತಾ ದರ್ಶನ ಕಾರ್ಯಕ್ರಮದೊಳಗೆ ಶೇಕಡ ನೂರರ ಗುರಿ ಮುಟ್ಟಬೇಕು-ಶಾಸಕ ಗೋವಿಂದಪ್ಪ

# ತೋಟಗಾರಿಕಾ ಅಧಿಕಾರಿಗೆ ಶಾಸಕ ತರಾಟೆ

» ಹೊಸದುರ್ಗ

ಸಾರ್ವಜನಿಕರ ಕುಂದು ಕೊರತೆಗಳ ವಿಚಾರದಲ್ಲಿ ಮುಂದಿನ ಜನತಾ ದರ್ಶನ ಕಾರ್ಯಕ್ರಮದೊಳಗೆ ಶೇಕಡ ನೂರರ ಗುರಿ ಮುಟ್ಟಬೇಕು

ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಅಧಿಕಾರಿಗಳಿಗೆ ತಾಕೀತು ಮಾಡಿದರು.

ತಾಲೂಕಿನ ಬಾಗೂರು ಗ್ರಾಮದ ಶ್ರೀ ಓರಗಲ್ಲಮ್ಮ ಸಮುದಾಯ ಭವನದಲ್ಲಿ ಮಂಗಳವಾರ ಆಯೋಜಿಸಲಾಗಿದ್ದ ತಾಲೂಕು ಮಟ್ಟದ ಜನತಾದರ್ಶನ ಕಾರ್ಯಕ್ರಮದ ಉದ್ಘಾಟಿಸಿ ಮಾತನಾಡಿದರು.

ಸಾಗುವಳಿ ಚೀಟಿ ಹಾಗೂ ನಿಗಮ ಮಂಡಳಿಗಳಲ್ಲಿ ಸಿಗುವ ಸಾಲ ಸೌಲಭ್ಯಕ್ಕೆ ಅರ್ಜಿ ಹಾಕಲಾಗಿದೆ. ಕೆಲವರು ಮಧ್ಯವರ್ತಿಗಳನ್ನು ಹಿಡಿದುಕೊಂಡು ಸುತ್ತಾಡುತ್ತಿರುವುದು ನನ್ನ ಗಮನಕ್ಕೆ ಬಂದಿದೆ ಎಂದರು.

ತಾಲೂಕಿನಲ್ಲಿ ಗೃಹಲಕ್ಷ್ಮಿ ಯೋಜನೆ ಅಡಿ ಶೇಕಡ 90 ಜನರಿಗೆ ಹಣ ಬಂದಿದೆ ಉಳಿದ ಹತ್ತು ಪರ್ಸೆಂಟ್ ಜನರಿಗೆ ತಾಂತ್ರಿಕ ದೋಷದಿಂದ ಬಂದಿಲ್ಲ ಮಹಿಳಾ ಮತ್ತು ಕಲ್ಯಾಣ ಇಲಾಖೆ ಅಧಿಕಾರಿಗಳು ಈ ಬಗ್ಗೆ ಗಮನಹರಿಸಿ ಜಾಗ್ರತೆ ವಹಿಸಿ ಪೂರ್ಣಗೊಳಿಸಬೇಕು ಎಂದರು.




ತಾಲ್ಲೂಕಿನ ತೆಂಗಿನಮರಗಳ ರೋಗ ಹೆಚ್ಚಳ ಆಗುತ್ತಿದೆ. ಅಧಿಕಾರಿಗಳು ವಿಜ್ಞಾನಿಗಳು ಬರಲಿ ಎಂದು ಕಾಯುವ ಬದಲು ಅವರು ಏನು ಮಾಡುವುದಿಲ್ಲ ರೈತರೇ ವಿಜ್ಞಾನಿಗಳು ಅವರಿಗೆ ಸರಿಯಾದ ಮಾರ್ಗದರ್ಶನ ನೀಡಿ ಎಂದರು. ಕಚೇರಿಗೆ ಬರುವ ಬದಲು ರೈತರ ತೋಟಗಳಿಗೆ ಹೋಗಿ ರೈತರಿಗೆ ಸರಿಯಾದ ಮಾಹಿತಿ ನೀಡಿ ಎಂದು ತೋಟಗಾರಿಕಾ ಇಲಾಖೆಯ ಅಧಿಕಾರಿಯನ್ನ ತರಾಟೆಗೆ ತಗೆದುಕೊಂಡರು. ಕಾರ್ಯಕ್ರಮದಲ್ಲಿ ಸಾಗುವಳಿ ಚೀಟಿ ಆಶ್ರಯ ಮನೆ ರಸ್ತೆ ನೀರು ಸೇರಿದಂತೆ ಹಲವಾರು ಕುಂದ ಕೊರತೆಗಳ ಬಗ್ಗೆ ಅರ್ಜಿ ಬಂದಿವೆ ಅರ್ಜಿ ಪಡೆದು ಅಧಿಕಾರಿಗಳು ಕಚೇರಿಯಲ್ಲಿ ಮೂಟೆ ಕಟ್ಟಿ ಇಡುವುದಲ್ಲ ಅವುಗಳಿಗೆ ಪರಿಹಾರ ಹುಡುಕಿ ಸಾರ್ವಜನಿಕರ ಅನುಕೂಲ ಮಾಡಿಕೊಡಬೇಕು ಎಂದರು.

ಈಗಾಗಲೇ ತಾಲೂಕಿನಲ್ಲಿ ಈ ಹಿಂದೆ ನೀಡಲಾಗಿದ್ದ ಮನೆಗಳಿಗೆ ಹಣ ಬಿಡುಗಡೆಯಾಗಿದ್ದು ಮನೆ ಕಟ್ಟಿಕೊಂಡ ಫಲಾನುಭವಿಗಳಿಗೆ ಗ್ರಾಮ ಪಂಚಾಯಿತಿಯವರು ಕೂಡಲೇ ಹಣ ಬಿಡುಗಡೆ ಮಾಡಬೇಕು. ಹೊಸ ಮನೆಗಳಿಗೆ ಅರ್ಜಿ ಸಲ್ಲಿಸಿದ್ದಾರೆ ಮೇ ನಂತರ ಹೊಸ ಮನೆಗಳಿಗೆ ಫಲಾನುಭವಿಗಳ ಆಯ್ಕೆ ಮಾಡಲಾಗುವುದು ಎಂದರು.

ತಹಸೀಲ್ದಾರ್ ತಿರುಪತಿ ಪಾಟೀಲ್ ಮಾತನಾಡಿ ಜನತಾದರ್ಶನ ಕಾರ್ಯಕ್ರಮದಲ್ಲಿ ಅರ್ಜಿ ಸಲ್ಲಿಸಿದ 15 ದಿನದೊಳಗಾಗಿ ಉತ್ತರ ನೀಡಲಾಗುವುದು ಎಂದರು. ಅರ್ಜಿ ಹಿಡಿದು ಸರ್ಕಾರಿ ಕಚೇರಿಗಳಿಗೆ ಹಾಗೂ ಶಾಸಕರ ಬಳಿ ಅಲೆದಾಡುವುದನ್ನು ತಪ್ಪಿಸಲು ವಾರಕೊಮ್ಮೆ ಜನತಾದರ್ಶನ ಕಾರ್ಯಕ್ರಮ ಮಾಡುತ್ತಿದ್ದೇವೆ ಎಂದರು.

ಇಓ ಸುನಿಲ್ ಗ್ರಾಮಪಂ ಉಪಾಧ್ಯಕ್ಷೆ ರಂಜಿತ, ಬಿ ಇ ಓ ಸಯ್ಯದ್ ಮೋಸಿನ್, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಸಿ ಎಸ್ ಈಶ, ಬಿ ಸಿ ಎಂ ವಿಸ್ತರಣಾಧಿಕಾರಿ ಶಶಿಧರ್ ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# ಸ್ವಾತಂತ್ರ್ಯ ಉದ್ಯಾನವನದಲ್ಲಿ ಬೃಹತ್ ಪ್ರತಿಭಟನೆ

» ಚಿತ್ರದುರ್ಗ

ಪದವಿ ಪೂರ್ವ ಶಿಕ್ಷಣ ಇಲಾಖೆಯನ್ನು ಜಿಪಂ ಅಧೀನಕ್ಕೆ ಒಳಪಡಿಸಿರುವ ರಾಜ್ಯ ಸರ್ಕಾರದ ಆದೇಶ ಹಿಂಪಂಡೆಯುವಂತೆ ಒತ್ತಾಯಿಸಿ ನವೆಂಬರ್ 23 ರಂದು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದ್ದರೂ ಸರ್ಕಾರ ಮಾತ್ರ ಈವರೆಗೂ ಯಾವುದೇ ಸಕಾರಾತ್ಮಕ ನಿಲುವು ಪ್ರಕಟಿಸಿಲ್ಲ.ಹೀಗಾಗಿ ಮತ್ತೊಮ್ಮೆ ಸರ್ಕಾರದ ಗಮನ ಸೆಳೆಯಲು ಇದೇ ಡಿಸೆಂಬರ್ ಒಂದನೇ ತಾರೀಖು ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ಬೃಹತ್ ಪ್ರತಿಭಟನೆ ನಡೆಸಲು ರಾಜ್ಯ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರ, ಉಪನ್ಯಾಸಕರ ಹಾಗೂ ಬೋಧಕೇತರ ಒಕ್ಕೂಟ ಕರೆ ನೀಡಿದೆ.

ಬಾಲಕರ ಸರ್ಕಾರಿ ಪಪೂ ಕಾಲೇಜಿನಲ್ಲಿ ಬುಧವಾರ ನಡೆದ ಮೂರು ಸಂಘಗಳ ಅಧ್ಯಕ್ಷರು,ಪದಾಧಿಕಾರಿಗಳು ಹಾಗೂ ಸದಸ್ಯರ ಸಭೆಯಲ್ಲಿ ಮಾತಾನಾಡಿದ ಉಪನ್ಯಾಸಕರ ಸಂಘದ ಜಿಲ್ಲಾಧ್ಯಕ್ಷ ಬಿ.ಆರ್.ಮಲ್ಲೇಶ್ ಚಿತ್ರದುರ್ಗ ಜಿಲ್ಲೆಯ ಎಲ್ಲಾ ಸರ್ಕಾರಿ,ಅನುದಾನಿತ ಹಾಗೂ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರು,ಉಪನ್ಯಾಸಕರು ಹಾಗೂ ಬೋಧಕೇತರ ನೌಕರರು ಸ್ವಯಂ ಪ್ರೇರಿತರಾಗಿ ಆ ದಿನ ಸಾಂದರ್ಭಿಕ ರಜೆ ಹಾಕಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಜರುಗುವ ಬೃಹತ್ ಸಮಾವೇಶದಲ್ಲಿ ಭಾಗಿಯಾಗುವಂತೆ ಮನವಿ ಮಾಡಿದರು.



ಇಡೀ ದೇಶಕ್ಕೆ ಮಾದರಿ ಎನಿಸುವ ಗುಣಮಟ್ಟದ ಶಿಕ್ಷಣ ಹಾಗೂ ಸಿಇಟಿ ಅರ್ಹತಾ ಪರೀಕ್ಷೆಗಳನ್ನು ನಡೆಸಿ ಸೈ ಎನಿಸಿಕೊಂಡ ಪಪೂ ಶಿಕ್ಷಣ ಇಲಾಖೆ ನಮ್ಮದು.ಬದಲಾವಣೆಯ ಹೆಸರಿನಲ್ಲಿ ಪಪೂಶಿ ಇಲಾಖೆಯ ಅಸ್ತಿತ್ವಕ್ಕೆ ದಕ್ಕೆಯಾಗಲಿದೆ.

ಅದ್ದರಿಂದ ನಾವುಗಳು ಮೌನವಹಿಸದೆ ಒಗ್ಗಾಟ್ಟಾಗಿ ವಿರೋಧಿಸಬೇಕಿದೆ ಎಂದು ತಿಳಿಸಿ ಜಿಲ್ಲೆಯ ಆರು ತಾಲ್ಲೂಕಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ನೌಕರರನ್ನು ಕರೆ ತರುವ ಜವಾಬ್ದಾರಿಯನ್ನು ಆಯಾ ತಾಲ್ಲೂಕಿನ ಉಪನ್ಯಾಸಕರ ಸಂಘದ ಅಧ್ಯಕ್ಷರಿಗೆ ವಹಿಸಲಾಯಿತು.

ಬೆಂಗಳೂರು ಸಮಾರಂಭದಲ್ಲಿ ಭಾಗವಹಿಸುವ ನೌಕರರು ಆಯಾ ತಾಲ್ಲೂಕು ಅಧ್ಯಕ್ಷರಲ್ಲಿ ತಮ್ಮ ಹೆಸರು ನೋಂದಾಯಿಸುವ ಮೂಲಕ ಒಟ್ಟಿಗೆ ಬೆಂಗಳೂರು ಚಲೋ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಪ್ರಾಚಾರ್ಯರ ಸಂಘದ ಜಿಲ್ಲಾಧ್ಯಕ್ಷರಾದ ಎಲ್.ರಂಗಪ್ಪ ತಿಳಿಸಿದರು.

ಬೆಂಗಳೂರಿಗೆ ಹೋಗಿ ಬರುವ ವಾಹನ,ಉಪಹಾರ ಊಟದ ವ್ಯವಸ್ಥೆ ಜವಾಬ್ದಾರಿಯನ್ನು ಪ್ರಾಚಾರ್ಯರ ಸಂಘದ ನಿಕಟ ಪೂರ್ವ ಅಧ್ಯಕ್ಷರಾದ ಕೆ.ನಾಗಣ್ಣ ಹಾಗೂ ಉಪನ್ಯಾಸಕರ ಸಂಘದ ಕಾರ್ಯಾಧ್ಯಕ್ಷರಾದ ಜಿ.ಎಸ್.ತಿಪ್ಪೇಸ್ವಾಮಿಯವರಿಗೆ ವಹಿಸಲಾಯಿತು.

ಸಭೆಯಲ್ಲಿ ಬೋಧಕೇತರ ಸಂಘದ ಜಿಲ್ಲಾಧ್ಯಕ್ಷ ಟಿ.ದುರುಗೇಶಪ್ಪ,ಜಿಲ್ಲಾ ಉಪನ್ಯಾಸಕರ ಸಂಘದ ಉಪಾಧ್ಯಕ್ಷ ಪಿ.ಕಾಂತರಾಜ್,ಹೊಳಲ್ಕೆರೆ ತಾಲ್ಲೂಕು ಅಧ್ಯಕ್ಷರಾದ ಆರ್.ಚಂದ್ರಶೇಖರ್, ಶಾಖಾಧಿಕಾರಿಗಳಾದ ಟಿ.ಎಂ. ಬಸವಯ್ಯ, ಉಪನ್ಯಾಸಕರಾದ ಡಿ.ಶ್ರೀನಿವಾಸ್, ಪಿ.ಎಂ.ಜಿ .ರಾಜೇಶ್,ಹೆಚ್.ಬಿ. ಬಸವರಾಜ್, ಎಂ.ಜೈಶ್ರೀ ನಿವಾಸ್, ಎ.ನಾಗರಾಜ್,ವಿ.ಚನ್ನಬಸಪ್ಪ, ಓ.ನಾಗರಾಜ್ ಭಾಗವಹಿಸಿದ್ದರು.

## ಕ್ರೀಡಾಪಟುಗಳಿಗೆ ಪ್ರೋತ್ಸಾಹ ಅಗತ್ಯ: ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ



» ಚಿತ್ರದುರ್ಗ

ಕ್ರೀಡಾಪಟುಗಳನ್ನು ಪ್ರೋತ್ಸಾಹಿಸುವ ಇಚ್ಛಾಶಕ್ತಿ ಸಾರ್ವಜನಿಕರಲ್ಲಿ ಬರಬೇಕು ಆಗ ಮಾತ್ರ ಸದೃಢ ದೇಶವನ್ನು ನಿರ್ಮಿಸಲು ಸಾಧ್ಯ. ಪ್ರಾಚೀನ ಕಾಲದಲ್ಲಿ ದೇಶೀಯ ಕ್ರೀಡೆಗಳಿಗೆ ಮನ್ನಣೆಯಿತ್ತು. ಹಾಗಾಗಿ ಅಂದು ಜನಸಮುದಾಯ ಯಾವುದೇ ಕಾಯಿಲೆಗಳಿಂದ ನರಳದೇ ಆರೋಗ್ಯವಂತರಾಗಿದ್ದರು. ಈ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳು ಪಾಠ ಪ್ರವಚನದ ಜೊತೆ ಕ್ರೀಡೆಗಳಲ್ಲಿ ತೊಡಗಿಸಿಕೊಳ್ಳವಂತೆ ಶಾಸಕ. ಕೆ.ಸಿ.ವೀರೇಂದ್ರ ಪಪ್ಪಿ ವಿದ್ಯಾರ್ಥಿಗಳಿಗೆ ಕರೆ ನೀಡಿದರು.ಕಾಲೇಜು ಶಿಕ್ಷಣ ಇಲಾಖೆ,ದಾವಣಗೆರೆ ವಿಶ್ವವಿದ್ಯಾನಿಲಯ ಹಾಗೂ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಸಹಯೋಗದಲ್ಲಿ ಬುಧವಾರ ನಗರದ ಸರ್ಕಾರಿ ಕಲಾ ಹಾಗೂ ವಿಜ್ಞಾನ ಕಾಲೇಜು ಮೈದಾನದಲ್ಲಿ, ಆಯೋಜಿಸಲಾಗಿದ್ದ ಅಂತರ್ ಕಾಲೇಜುಗಳ ಹ್ಯಾಂಡ್‌ಬಾಲ್ ಪಂದ್ಯಾವಳಿಗೆ ಚಾಲನೆ ನೀಡಿ ಮಾತನಾಡಿದರು.ಸ್ಥಳೀಯ ಸಂಘ ಸಂಸ್ಥೆಗಳು ಕ್ರೀಡಾ ಕೂಟಗಳನ್ನು ಅಯೋಜಿಸಿ ಕ್ರೀಡಾಪಟುಗಳನ್ನು ಪ್ರೋತ್ಸಾಹಿಸಬೇಕು. ಸರ್ಕಾರ ಪೋಲಿಸ್ ಇಲಾಖೆಯ ನೇಮಕಾತಿಯಲ್ಲಿ ಕ್ರೀಡಾ ಖೋಟಾದಡಿ ಶೇಕಡ 2% ರಷ್ಟು ಮೀಸಲು ನೀಡಿದೆ. ಕ್ರೀಡಾಪಟುಗಳು ಸೋಲು ಮತ್ತು ಗೆಲುವುಗಳನ್ನು ಸಮಾನವಾಗಿ ಸ್ವೀಕರಿಸಬೇಕು. ಕ್ರೀಡೆಯಿಂದ ಆರೋಗ್ಯ ಮತ್ತು ಆಯುಸ್ಸು ವೃದ್ಧಿಯಾಗುತ್ತದೆ ಎಂದು ಹೇಳಿದರು. ಕಲಾ ಕಾಲೇಜಿನ ಪ್ರಾಂಶುಪಾಲ ಡಾ.ಹೆಚ್.ಗುಡ್ಡದೇಶ್ವರಪ್ಪ ಅಧ್ಯಕ್ಷತೆ ವಹಿಸಿದ್ದರು. ಪ್ರಾಧ್ಯಪಕರುಗಳಾದ ಡಾ.ವೆಂಕಟೇಶ್, ಎಂ.ಜೆ.ಸಾಧಿಕ್, .ಬಿ.ಹೆಚ್.ಕುಮಾರಸ್ವಾಮಿ, ಡಾ.ಸಿದ್ದಪ್ಪ.ಡಿ.ಓ, .ಮಂಜುನಾಥ.ಬಿ, ಡಾ.ಚನ್ನಕೇಶವ.ಸಿ, ಕ್ರೀಡಾ ಸಂಚಾಲಕ ಶ್ರೀ.ಶಿವಪ್ರಸಾದ್.ಆರ್, ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷ ತಿಪ್ಪೇಸ್ವಾಮಿ.ಹೆಚ್, ಶಕುಂತಲ.ಹೆಚ್, ಡಾ.ಶಿವಣ್ಣ ಹಾಗೂ ದಾವಣಗೆರೆ ವಿಶ್ವವಿದ್ಯಾನಿಲಯದ ವಿವಿಧ ಕಾಲೇಜುಗಳಿಂದ ಆಗಮಿಸಿದ ಕ್ರೀಡಾಪಟುಗಳು ಇದ್ದರು.

# ಮನುಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಸನ್ಮಾನ

» ದಾವಣಗೆರೆ

ಮಹಾನಗರ ಪಾಲಿಕೆ ಕನ್ನಡಪರ ಸಂಘ ಸಂಸ್ಥೆಗಳು ಮತ್ತು ಪತ್ರಕರ್ತರ ಸಂಯುಕ್ತ ಆಶ್ರಯದಲ್ಲಿ 68ನೇ ಕನ್ನಡ ರಾಜ್ಯೋತ್ಸವ ಸಮಾರಂಭವು ಮೂರು ದಿನಗಳ ಕಾಲ ಅದ್ದೂರಿಯಾಗಿ ಇಲ್ಲಿನ ಮಹಾನಗರ ಪಾಲಿಕೆ ಆವರಣದಲ್ಲಿ ಅದ್ದೂರಿಯಾಗಿ ನಡೆಯಿತು. ಈ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸನ್ಮಾನಿತರಿಗೆ ಸನ್ಮಾನಿಸಲಾಯಿತು.

ನ. 27 ರಂದು ನಡೆದ ವಿವಿಧ ಕ್ಷೇತ್ರಗಳ ಸಾಧಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ದಾವಣಗೆರೆ ತಾ.ಫೋಟೋ ಮತ್ತು ವೀಡಿಯೋಗ್ರಾರ್ಸ್ ಸಂಘದ ಅಧ್ಯಕ್ಷ, ಜಿಲ್ಲಾ ಕ್ರೇಜಿಸ್ಟಾರ್ ವಿ.ರವಿಚಂದ್ರನ್ ಅಭಿಮಾನಿಗಳ ಸಂಘದ ಅಧ್ಯಕ್ಷ, ಕಳೆದ 25 ವರ್ಷಗಳಿಂದ ಸಮಾಜ ಸೇವೆಯಲ್ಲಿ ಗುರುತಿಸಿಕೊಂಡಿರುವ ಸಮಾಜ ಸೇವಕ ಎಂ.ಮನು ಗೆ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಿದರು. ಈ ಸಂದರ್ಭದಲ್ಲಿ ಮಹಾಪೌರರಾದ ವಿನಾಯಕ ಪೈಲ್ವಾನ್, ಜಿಲ್ಲಾಧಿಕಾರಿ ಡಾ.ಎಂ.ವಿ. ವೆಂಕಟೇಶ್, ಪಾಲಿಕೆ ಅಯುಕ್ತರಾದ ರೇಣುಕಾ, ಸಾಹಿತಿ ಡಾ.ರಂಜಾನ್ ದರ್ಗಾ, ಧರ್ಮ ಗುರು ಜೈನಿ ಉಸ್ತಾದ್, ನಗರಸಭೆ ಮಾಜಿ ಅಧ್ಯಕ್ಷ ಕೆ.ಜಿ. ಶಿವಕುಮಾರ್, ಉಪ ಮಹಾಪೌರರಾದ ಯಶೋಧ ಹೆಗ್ಗಪ್ಪ, ಪಾಲಿಕೆ ಸದಸ್ಯ ಎ.ನಾಗರಾಜ, ಸಂತೋಷ ದೊಡ್ಡಮನಿ,ಚಂದ್ರು ಮೌಳಿ,ದಯಾನಂದ, ರಂಗನಾಥ್ , ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷರಾದ ನಾಗರಾಜ್ ಜಾಂಬಳ್ಳಿ ಇತರರು ಇದ್ದರು.

## ವಿಶ್ವ ಏಡ್ಸ್ ದಿನಾಚರಣೆ

ದಾವಣಗೆರೆ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕು.ಕ.ಇಲಾಖೆ, ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕ, ಜಿಲ್ಲಾ ಎನ್.ಸಿ.ಸಿ. ಮತ್ತು ಎನ್.ಎಸ್.ಎಸ್, ಜಿಲ್ಲೆಯ ಎಲ್ಲಾ ಆರ್.ಆರ್.ಸಿ ಕಾಲೇಜುಗಳು ಮತ್ತು ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದೊಂದಿಗೆ ಡಿಸೆಂಬರ್ 1 ರಂದು ಬೆಳಗ್ಗೆ 11 ಗಂಟೆಗೆ ಎ.ವಿ. ಕಮಲಮ್ಮ ಮಹಾವಿದ್ಯಾಲಯದಲ್ಲಿ ಜಿಲ್ಲಾ ಮಟ್ಟದ ವಿಶ್ವ ಏಡ್ಸ್ ದಿನಾಚರಣೆ ಹಮ್ಮಿಕೊಳ್ಳಲಾಗಿದೆ.

ಪ್ರಮುಖ ಸುದ್ದಿ

# ದೇವತೆಗಳಿಗೆ ವಸ್ತ್ರ ನೀಡಿದ್ದು ದೇವಾಂಗ ನೇಕಾರ ಸಮಾಜ

» ಹೊಸದುರ್ಗ

ಶುಕ್ರವಾರ ಬಂತೆಂದರೆ ಬಹಳ ವಿಶೇಷವಾದ ದಿನ. ಇಂದು ದೇವಲ ಮಹರ್ಷಿ ಜನ್ಮದಿನ. ದೇವಾನು ದೇವತೆಗಳಿಗೆ ವಸ್ತ್ರ ನೀಡಿದ ಪವಿತ್ರ ಕೆಲಸ ಮಾಡಿದ್ದು ದೇವಾಂಗ ನೇಕಾರ ಸಮಾಜ. ಪೂರ್ವ ಜನ್ಮದ ಸಂಸ್ಕಾರಗಳಂತೆ ನಮ್ಮ ನಿತ್ಯದ ಕೆಲಸ ಕಾರ್ಯ ನಡೆಯುತ್ತದೆ ಎಂದು ಹಂಪಿ ಗಾಯಿತ್ರಿ ಪೀಠದ ಶ್ರೀ ದಯಾನಂದಪುರಿ ಸ್ವಾಮೀಜಿ ತಿಳಿಸಿದರು.

ತಾಲೂಕಿನ ಐತಿಹಾಸಿಕ ನೀರಗುಂದ ಗ್ರಾಮದಲ್ಲಿ ಜೀರ್ಣೋದ್ಧಾರಗೊಂಡಿರುವ ನೂತನ ಶ್ರೀ ಚೌಡೇಶ್ವರಿದೇವಿ ದೇವಸ್ಥಾನದ ಲೋಕಾರ್ಪಣೆಯ ಪ್ರಾರಂಭೋತ್ಸವ ಮತ್ತು ಕಳಶಾರೋಹಣ ಸಮಾರಂಭದ ಅಂಗವಾಗಿ ಧಾರ್ಮಿಕ ಸಭೆ ಕಾರ್ಯಕ್ರಮದ ಸಾನಿದ್ಯ ವಹಿಸಿ ಆಶೀರ್ವಚನ ನೀಡಿದರು.

ನೀರಗುಂದ ಈ ಊರಿಗೆ ನೂರಾರು ವರ್ಷಗಳ ಇತಿಹಾಸ ಇರುವುದು ಬಹಳ ವಿಶೇಷ. ಇಂತಹ ಪವಿತ್ರ ನೆಲ ಹಾಗೂ ಸಂಸ್ಕಾರವಂತ ಭೂಮಿಯಲ್ಲಿ ಜನಿಸಿದ ನೀವೆಲ್ಲರೂ ಪುಣ್ಯವಂತರು. ಇಲ್ಲಿರುವ ಇಂತಹ ಐತಿಹಾಸಿಕ ದೇವಾಲಯಗಳಿಗೆ ಸುಣ್ಣಬಣ್ಣ ಹಚ್ಚಿದರೆ ಐತಿಹಾಸಿಕತೆ ಮರೀಚಿಕೆ ಆಗುತ್ತದೆ. ದೇವರ ನೆಪದಲ್ಲಿ ಸಂಸ್ಕಾರ, ಸದ್ಬುದ್ಧಿ ಸಂಪಾದಿಸಬೇಕು. ಎಂದು ಸಲಹೆ ನೀಡಿದರು.



ಭಗೀರಥ ಗುರುಪೀಠದ ಶ್ರೀ ಪುರುಷೋತ್ತಮಾನಂದಪುರಿ ಸ್ವಾಮೀಜಿ ನೇತೃತ್ವ ವಹಿಸಿ ಮಾತನಾಡಿ, ನೀಲಾವತಿ ಪಟ್ಟಣವೆಂದು ಐತಿಹಾಸಿಕವಾಗಿ ಹೆಸರಾಗಿರುವ ನೀರಗುಂದ ಗ್ರಾಮಕ್ಕೆ ವಿಶೇಷವಾದ ಇತಿಹಾಸವಿದೆ ಎಂದರು.

ದೇವಾಂಗ ಸಂಘದ ರಾಜ್ಯ ಅಧ್ಯಕ್ಷ ರವೀಂದ್ರ ಪಿ.ಕಲಬುರ್ಗಿ ಮಾತನಾಡಿ, ಸಮಾಜದ ಅಭಿವೃದ್ಧಿಗೆ ಸಂಘಟನೆ ಬಹಳ ಮುಖ್ಯ. ಈ ಹಿನ್ನೆಲೆಯಲ್ಲಿ ಸಮಾಜದವರು ಜಾಗೃತರಾಗಬೇಕು ಎಂದು ಕರೆ ನೀಡಿದರು.

ದೇವಾಂಗ ಸಂಘದ ಹೊಸದುರ್ಗ ತಾಲೂಕು ಅಧ್ಯಕ್ಷ ಗೋ.ತಿಪ್ಪೇಶ್

ಜಿಲ್ಲಾ ಪಂಚಾಯ್ತಿ ಮಾಜಿ ಸದಸ್ಯ ಆರ್.ಹನುಮಂತಪ್ಪ ಮಾತನಾಡಿದರು. ನೀರಗುಂದ ದೇವಾಂಗ ಸಮಾಜದ ಅಧ್ಯಕ್ಷ ಎನ್.ಶೇಖರಪ್ಪನವರು ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯ್ತಿ ಅಧ್ಯಕ್ಷೆ ಪ್ರೇಮಾ ಬಸವರಾಜಪ್ಪ, ಸದಸ್ಯರು, ಗೌಡ್ರುಗಳು,ಮುಖಂಡರುಗಳು ಸೇರಿದಂತೆ ಇನ್ನಿತರ ಯುವ ಮುಖಂಡರು ಹಾಗೂ ಗ್ರಾಮಸ್ಥರು ಹಾಜರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T